# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 01 ಸಂಚಿಕೆ – 29 ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 ಚಿತ್ರದುರ್ಗ ದಿನಾಂಕ : 03–08–2023 ಗುರುವಾರ ಪುಟ: 4 ಬೆಲೆ : ರೂ.2–00
Volume - 01 Issue - 29 Title- Code: KARKAN 28269 Chitradurga Date : 03-08-2023 Thursday Page: 4 Price: Rs. 2-00



ಒಳ ಪುಟದ ಸುದ್ದಿಗಳು

2 ಕೆರೆಗಳಿಗೆ ನೀರು ತುಂಬಿಸುವ ಅಧಿಕಾರ ನಮ್ಮಲ್ಲಿ ಇರಲಿ : ಶಾಸಕ ಬಿ.ಜಿ.ಗೋವಿಂದಪ್ಪ

3 ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವಿಶ್ವ ಹೆಪಟೈಟಿಸ್ ದಿನಾಚರಣೆ

4 ಅಸಮಾಧಾನ ಅತೃಪ್ತಿ ಲೋಕಸಭೆ ಗೆಲುವಿಗೆ ಶ್ರಮಿಸಿ : ಹೈಕಮಾಂಡ್


# ಕಲುಷಿತ ನೀರು ಸೇವನೆಗೆ ಮೂರನೇ ಬಲಿ

## ಕವಾಡಿಗರಹಟ್ಟಿ ಜನರಲ್ಲಿ ಹೆಚ್ಚಿದ ಆತಂಕ



**ಚಿತ್ರದುರ್ಗ :** ಚಿತ್ರದುರ್ಗ ನಗರದ ಹೊರವಲಯವಾದಲ್ಲಿರುವ ಕವಾಡಿಗರ ಹಟ್ಟಿಯ ಬಡಾವಣೆಯ ಜನರಲ್ಲಿ ನಿನ್ನೆಯಿಂದ ಆತಂಕ ಮನೆ ಮಾಡಿದ್ದು ನಿವಾಸಿಗಳಿಗೆ ಒಂದು ರೀತಿ ಭೀತಿಯ ವಾತವರಣ ನಿರ್ಮಾಣವಾಗಿದ್ದು ಕಲುಷಿತ ನೀರು ಸೇವಿಸಿ ಅಸ್ವಸ್ಥರಾದವರ ಕ್ಷಣ ಕ್ಷಣಕ್ಕೂ ಹೆಚ್ಚುತ್ತಿದ್ದು ಸಂಖ್ಯೆ 78 ಕ್ಕೆ ಏರಿಕೆ ಆಗಿದೆ.

ನಗರದಲ್ಲಿ ಎಲ್ಲಾ ಕಡೆ ನೀರು ಸರಬರಾಜು ಆಗುವುದು ಸಾಮಾನ್ಯ ಆದರೆ ಹಲವು ವರ್ಷಗಳಿಂದ. ನೀರು ಸರಬರಾಜು ಆಗುವ ತಟ್ಟಿಗಳನ್ನು ಸ್ವಚ್ಚತೆ ಮಾಡಿದೆ ಇರುವುದು ನೀರು ಕಲುಷಿತವಾಗಲು ಸಾಧ್ಯ ಎಂಬುದು ಬಂದು ಕಡೆಯಾದರೇ ಆ ಭಾಗಕ್ಕೆ ಮಾತ್ರ ಹೇಗೆ ಕಲುಷಿತ ನೀರು ಸರಬರಾಜು ಆಯಿತು ಎಂಬುದು ಎಲ್ಲಾರಿಗೂ ಯಕ್ಷ ಪ್ರಶ್ನೆಯಾಗಿದೆ. ಜನರು ಈ ಘಟನೆಯಿಂದ ಭಯಭೀತರಾಗಿದ್ದು ನೀರು ಕುಡಿಯಲು ಭಯ ಪಡುವ ಪರಿಸ್ಥಿತಿ ನಿರ್ಮಾಣವಾಗಿದೆ. ಅಸ್ವಸ್ಥರಾದವರ ಸಂ–ಖ್ಯೆ ಏರುತ್ತಲೇ ಇದ್ದು ಕಲುಷಿತ ನೀರಿನ ಸೇವನೆಯಿಂದ ಅಸ್ವಸ್ಥರಾದವರನ್ನು ಆಸ್ಪತ್ರೆಗೆ ದಾಖಲಿಸಲಾಗುತ್ತಿದ್ದು, ಜಿಲ್ಲಾ ಆಸ್ಪತ್ರೆಯಲ್ಲಿ 18 ಹಾಗೂ ಬಸವೇಶ್ವರ ಆಸ್ಪತ್ರೆಗೆ 60 ಜನರನ್ನು ದಾಖಲಾಗಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಇನ್ನು ಕಲುಷಿತ ನೀರು ಕುಡಿದು ಇಬ್ಬರು ಮೃತಪಟ್ಟಿದ್ದಾರೆ. ಈ ಪೈಕಿ ಮಂಜುಳಾ(23) ಅವರ ಕುಟುಂಬಸ್ಥರು ಅವರ ಸಾವಿಗೆ ಪರಿಹಾರ ನೀಡದೆ ಅಂತ್ಯ ಸಂಸ್ಕಾರ ಮಾಡಲು ಅವಕಾಶ ನೀಡಲ್ಲವೆಂದು ಭಾರೀ ವಿರೋಧ ವ್ಯಕ್ತಪಡಿಸುತ್ತಿದ್ದಾರೆ.

ಜಿಲ್ಲಾಧಿಕಾರಿ ಪರಿಹಾರ ದ ಚೆಕ್ ನೀಡಬೇಕು. ನೀರ ಗಂಟಿಯನ್ನು ಬಂಧಿಸಬೇಕು ಎಂದು ಪಟ್ಟು ಹಿಡಿದಿದ್ದಾರೆ. ಹೊಳಲ್ಕೆರೆ ರಸ್ತೆ ಹಾಗೂ ರಾಷ್ಟ್ರೀಯ ಹೆದ್ದಾರಿ 48 ಕ್ಕೆ ಸಂಪರ್ಕ ಕಲ್ಪಿಸುವ ಮಾರ್ಗ ಬಂದ್ ಮಾಡಿ ಪ್ರತಿಭಟನೆಗೆ ಸ್ಥಳೀಯರು ಮುಂದಾಗಿದ್ದರು. ಈ ವೇಳೆ ಸ್ಥಳಕ್ಕೆ ಆಗಮಿಸಿದ ಪೊಲೀಸರು ಮನವೊಲಿಸಲು ಮುಂದಾಗಿದ್ದಾರೆ.

ಮತ್ತೊಬ್ಬ ಚಿತ್ರದುರ್ಗದ ವ್ಯಕ್ತಿ ರಘು ಕಲುಷಿತ ನೀರು ಸೇವಿಸಿ ಫ್ರಿಡ್ಜ್ ರಿಪೇರಿ ಮಾಡಲು ನಿತ್ಯ ಎಂದಿನಂತೆ ಕೆಲಸಕ್ಕಾಗಿ ಬೆಂಗಳೂರಿಗೆ ತೆರಳಿದಾಗ ವಾಂತಿ–ಭೇದಿ ಕಾಣಿಸಿಕೊಂಡು ಬೆಂಗಳೂರಿನಲ್ಲಿ ಮೃತಪಟ್ಟರು. ರಘು ಮೃತದೇಹದ ಮರಣೋತ್ತರ ಪರೀಕ್ಷೆ ಮುಗಿದಿದ್ದು, ಮೃತದೇಹವನ್ನು ಚಿತ್ರದುರ್ಗಕ್ಕೆ ತರಲಾಗುತ್ತಿದೆ.

ಗ್ರಾಮದ ಓವರ್‌ಹೆಡ್ ಟ್ಯಾಂಕ್ ನಿರ್ಮಾಣಗೊಂಡು 25 ವರ್ಷ ಕಳೆದರೂ ನೀರಿನ ಟ್ಯಾಂಕ್ ನ್ನ ಒಮ್ಮೆಯೂ ಸ್ವಚ್ಚಗೊಳಿಸಿಲ್ಲ ಎಂದು ಸ್ಥಳೀಯರು ಆರೋಪಿಸಿದ್ದರು. ಇದೀಗ ಗ್ರಾಮದಲ್ಲಿ ನೀರು ಸರಬರಾಜು ಸ್ಥಗಿತ ಗೊಂಡಿರುವುದರಿಂದ ಟ್ಯಾಂಕರ್ ನಲ್ಲಿ ನೀರು ಪೂರೈಕೆ ಮಾಡಲಾಗುತ್ತಿದೆ.

ಇಡೀ ಬಡಾವಣೆಯಲ್ಲಿ ಆತಂಕ, ಭೀತಿಯ ವಾತಾವಾರಣ ನಿರ್ಮಾಣ ವಾಗಿದೆ. ಇನ್ನು ಗ್ರಾಮದಲ್ಲಿದ್ದ ಶುದ್ಧ ಕುಡಿಯುವ ನೀರಿನ ಘಟಕದ ಗಾ–ಜಿಗೆ ಕಲ್ಲು ತೂರಿ ಜನ ಆಕ್ರೋಶ ವ್ಯಕ್ತಪಡಿಸಿದ್ದಾರೆ.

**ಅಧಿಕಾರಿಗಳ ಭೇಟಿ :** ಕಲುಷಿತ ನೀರು ಸೇವನೆಯಿಂದ ನಿನ್ನೆ ಮೃತಪಟ್ಟಿದ್ದ ಮಹಿಳೆಯ ಮನೆಗೆ ಅಧಿಕಾರಿಗಳ ತಂಡ ಭೇಟಿ ನೀಡಿದೆ.

ಸ್ಥಳಕ್ಕೆ ಜಿಲ್ಲಾಧಿಕಾರಿ ದಿವ್ಯ ಪ್ರಭು ಜಿ.ಆರ್.ಜೆ, ಎಸ್ಪಿ ಪರಶುರಾಮ್ ಹಾಗೂ ತಹಶೀಲ್ದಾರ್ ನಾಗವೇಣಿ ಮತ್ತು ಮತ್ತಿತರ ಅಧಿಕಾರಿಗಳು ಭೇಟಿ ನೀಡಿದ್ದಾರೆ.



ಸಚಿವರು ಹತ್ತು ಲಕ್ಷ ಪರಿಹಾರ ಘೋಷಿಸಿದ್ದಾರೆ. ಪೋಸ್ಟ್ ಪಿಎಂ ವರದಿ ಬಂದ ನಂತರ ನಿಯಮಾನುಸಾರ ಕ್ರಮ ವಹಿಸಲಾಗುವುದು.

ರೋಗಿಗಳು ಆರೋಗ್ಯ ಸ್ಥಿರವಾಗಿದೆ. ಕಾಲ ಕಾಲಕ್ಕೆ ಸೂಕ್ತ ಚಿಕಿತ್ಸೆ ನೀಡಲಾಗುತ್ತಿದೆ. ಮೃತಪಟ್ಟಿರುವ ಮಹಿಳೆಯ ಸಂಬಂಧಿಕರಿಗೆ ಶವ ಸಂಸ್ಕಾರಕ್ಕೆ ನಿರಾಕರಿಸಿದ್ದರಯ ಆದರೆ ಮನವೊಲಿಸಿದ್ದು ಅಂತ್ಯ ಸಂಸ್ಕಾರಕ್ಕೆ ಒಪ್ಪಿಸಿದ್ದೇವೆ. ಎಲ್ಲ ಟ್ಯಾಂಕ್ ಸ್ವಚ್ಚತೆ ಮಾಡಿಸುತ್ತಿದ್ದೇವೆ. ಈ ಪ್ರಕರಣ ಬಗ್ಗೆ ಬೆಳಗ್ಗೆ ಸಿಎಂ ಅವರು ಮಾಹಿತಿ ಪಡೆದು–ಕೊಂಡಿದ್ದಾರೆ. ಈ ಪ್ರಕರಣದ ತನಿಖೆ ಮಾಡಲು ತನಿಖಾ ಸಮಿತಿ ರಚಿಸಲಾಗಿದೆ. ಡಿಯುಡಿಸಿ, ಆರ್ಡಬ್ಲ್ಯುಎಸ್, ಕೆಯುಡಬ್ಲ್ಯೆಸ್ ಅಧಿಕಾರಿಗಳ ತಂಡ ಇದೆ. ಮೂರು ದಿನದಲ್ಲಿ ವರದಿ ಕೊಡಲು ಸೂಚಿಸಿದ್ದೇವೆ. ವರದಿ ಬಂದ ನಂತರ

ತಪ್ಪಿತಸ್ಥರ ಮೇಲೆ ಕಠಿಣ ಕ್ರಮ ಜರುಗಿಸಲಾಗುವುದು. ಸಿಎಂ ಸೂಚನೆ ನೀಡಿದ್ದಾರೆ. ಇಬ್ಬರು ಮೃತಪಟ್ಟಿದ್ದು ರಘು ಬೆಂಗಳೂರಿನಲ್ಲಿ ಮೃತಪಟ್ಟಿದ್ದು ಪಿಎಂ ವರದಿ ಬರಬೇಕಿದೆ. ವಡ್ಡರಸಿದ್ದವ್ವನಹಳ್ಳಿ ಪ್ರವೀಣ್ ಎಂಬುವವರು ಮೃತಪಟ್ಟಿರುವ ವರದಿ ಬಂದಿದೆ ಅದೂ ಪಿಎಂ ಆಗಬೇಕು ಎಲ್ಲಾ ಮಾಹಿತಿ ಪಡೆದು ನಿಯಮಾನುಸಾರ ಪರಿಹಾರ ನೀಡಲಾಗುತ್ತದೆ. ತಪ್ಪಿತಸ್ಥ ಅಧಿಕಾರಿಗಳ ವಿರುದ್ದ ನಿರ್ದಾಕ್ಷಿಣ್ಯವಾಗಿ ಸೂಕ್ತ ಕ್ರಮ ಜರುಗಿಸಲಾಗುತ್ತದೆ.

– **ದಿವ್ಯಪ್ರಭು ಜಿ.ಆರ್.ಜೆ.** ಜಿಲ್ಲಾಧಿಕಾರಿಗಳು ಚಿತ್ರದುರ್ಗ

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಅನುಮಾನಾಸ್ಪದ ಸಾವಿನ ಪ್ರಕರಣ ದಾಖಲಿಸಲಾಗಿದೆ. ಎಫ್ಎಸ್ಎಲ್ ವರದಿ ಬಂದ ನಂತರ ಕ್ರಮ ಜರುಗಿಸಲಾಗುವುದು.

ನೀರಗಂಟಿ ಬಗ್ಗೆ ಗ್ರಾಮಸ್ಥರು ಆರೋಪಿಸಿದ್ದು ವಿಚಾರಣೆ ನಡೆಸುತ್ತೇವೆ.ಮೇ 2022 ರಲ್ಲಿ ಪೋಕ್ಸೋ ಪ್ರಕರಣ ಆಗಿತ್ತು. ಅದರ ಆಧಾರದಲ್ಲಿ ಕೂಡಾ ತನಿಖೆ ನಡೆಯುತ್ತೇವೆ.

– **ಪರುಶುರಾಮ್,** ಜಿಲ್ಲಾ ಪೋಲೀಸ್ ವರಿಷ್ಠಾಧಿಕಾರಿಗಳು, ಚಿತ್ರದುರ್ಗ.

## ಕೆ.ಎಸ್.ನವೀನ್ ಚೆಕ್ ವಿತರಣೆ



ಕಲುಷಿತ ನೀರನ್ನು ಸೇವಿಸಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿರುವ ರೋಗಿಗಳನ್ನು ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್ ಬೇಟಿ ಮಾಡಿ ಸಂತ್ವಾನ ಹೇಳಿ ಇವರಿಗೆ ಸೂಕ್ತವಾದ ಚಿಕಿತ್ಸೆಯನ್ನು ನೀಡುವಂತೆ ಸೂಚಿಸಿದರು.

ನಂತರ ಕವಾಡಿಗರಹಟ್ಟಿಗೆ ಬೇಟಿ ನೀಡಿ ಈ ಪ್ರಕರಣದಲ್ಲಿ ವೃತ ಪಟ್ಟವರ ಮನೆಗೆ ಭೇಟಿ ನೀಡಿ ಅವರ ಕುಟುಂಬಕ್ಕೆ ಸಂತ್ವಾನ ಹೇಳಿ ಎರಡು ಮೃತ ಕುಂಟುಂಬ ವರ್ಗದವರಿಗೆ ತಲಾ 50 ಸಾವಿರ ರೂ.ಗಳ ವೈಯಕ್ತಿಕ ಪರಿಹಾರ ಚಕ್ ವಿತರಿಸಿದರು.

## ಫಾಸ್ಟ್ ನ್ಯೂಸ್

### ಪೂರ್ವಭಾವಿ ಸಭೆ

**ಚಿತ್ರದುರ್ಗ :** ಜಿಲ್ಲಾ ಕೇಂದ್ರದಲ್ಲಿ ಇದೇ ಆ. 15 ರಂದು ಆಚರಿಸಲಾಗುವ ಭಾರತದ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮ ಕುರಿತು ಸಿದ್ಧತೆಗಳನ್ನು ಕೈಗೊಳ್ಳಲು ಪೂರ್ವಭಾವಿ ಸಭೆ ಆ. 04 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆಯಲಿದೆ.

ಸಭೆಯ ಅಧ್ಯಕ್ಷತೆಯನ್ನು ಜಿಲ್ಲಾಧಿಕಾರಿ ದಿವ್ಯಪ್ರಭು ಜಿ.ಆರ್.ಜೆ. ಅವರು ವಹಿಸುವರು, ಸಭೆಗೆ ಸಂಬಂಧಪಟ್ಟ ಅಧಿಕಾರಿಗಳು, ಸಂಘ ಸಂಸ್ಥೆಗಳ ಅಧ್ಯಕ್ಷರು ಭಾಗವಹಿಸುವಂತೆ ಅಪರ ಜಿಲ್ಲಾಧಿಕಾರಿ ಬಿ.ಟಿ. ಕುಮಾರಸ್ವಾಮಿ ಅವರು ತಿಳಿಸಿದ್ದಾರೆ.

### ಜಿಲ್ಲಾ ಆಸ್ಪತ್ರೆಗೆ ಹಿರಿಯ ಸಿವಿಲ್ ನ್ಯಾಯಾಧೀಶ ಭೇಟಿ



**ಚಿತ್ರದುರ್ಗ :** ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ. ವಿಜಯ್ ಅವರು ಬುಧವಾರ ಜಿಲ್ಲಾ ಆಸ್ಪತ್ರೆಗೆ ಭೇಟಿ ನೀಡಿ, ಚಿತ್ರದುರ್ಗ ನಗರದ ಕವಾಡಿಗರಹಟ್ಟಿಯಲ್ಲಿ ಕಲುಷಿತ ನೀರು ಸೇವಿಸಿ ಅಸ್ವಸ್ಥರಾಗಿ ಚಿಕಿತ್ಸೆ ಪಡೆಯುತ್ತಿರುವರ ಯೋಗಕ್ಷೇಮ ವಿಚಾರಿಸಿದರು.

ಜಿಲ್ಲಾಸ್ಪತ್ರೆಯ ಮಕ್ಕಳ ವಿಭಾಗ, ತುರ್ತು ಚಿಕಿತ್ಸಾ ವಿಭಾಗದ ಘಟಕಗಳಿಗೆ ತೆರಳಿ ಮಾಹಿತಿ ಪಡೆದ ಅವರು, ಅಸ್ವಸ್ಥರಿಗೆ ಸೂಕ್ತ ಚಿಕಿತ್ಸೆ ನೀಡುವಂತೆ ವೈದ್ಯರಿಗೆ ಸೂಚನೆ ನೀಡಿದರು.

ಘಟನೆಯಲ್ಲಿ ಮೃತಪಟ್ಟ ಮಂಜುಳಾ ಅವರಿಗೆ ಇಬ್ಬರು ಮಕ್ಕಳಿದ್ದು, ಅವರಿಗೆ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿಯಿಂದ ಅಗತ್ಯ ನೆರವು ನೀಡಲಾಗುವುದು. ಸರ್ಕಾರದಿಂದ ದೊರೆಯುವ ಸೌಲಭ್ಯಗಳನ್ನೂ ತಲುಪಿಸಲಾಗುವುದು ಎಂದರು.

ಜೀವಿಸುವ ಹಕ್ಕು ಸಂವಿಧಾನಾತ್ಮಕವಾಗಿ ಎಲ್ಲರಿಗೂ ಲಭಿಸಿದೆ. ಶುದ್ಧ ಕುಡಿಯುವ ನೀರು ಪಡೆಯುವುದು ಎಲ್ಲರ ಹಕ್ಕು. ತಕ್ಷಣವೇ ಕವಾಡಿಗರ ಹಟ್ಟಿಯಲ್ಲಿ ಶುದ್ಧ ಕುಡಿಯುವ ನೀರಿನ ಸೌಲಭ್ಯಕ್ಕೆ ಪರ್ಯಾಯ ವ್ಯವಸ್ಥೆ ಕಲ್ಪಿಸಲು ನಗರಸಭೆಗೆ ನಿರ್ದೇಶನ ನೀಡಿದ್ದೇನೆ. ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದಿಂದ ಘಟನೆಯಲ್ಲಿ ಬಾಧಿತರಾದವರಿಗೆ ಸೂಕ್ತ ಕಾನೂನಿನ ನೆರವು ಸಹ ನೀಡಲಾಗುವುದು ಎಂದರು.

ಈ ಸಂದರ್ಭದಲ್ಲಿ ಜಿಲ್ಲಾ ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷ ಪ್ರಭಾಕರ್, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಬಸವರಾಜ, ವೈದ್ಯಾಧಿಕಾರಿ ಆನಂದ ಪ್ರಕಾಶ್, ಶುಶ್ರೂಷಕ ಮಲ್ಲಣ್ಣ ಸೇರಿದಂತೆ ಜಿಲ್ಲಾಸ್ಪತ್ರೆಯ ಸಿಬ್ಬಂದಿ ಇದ್ದರು.

### ಪಿಎಚ್‌ಡಿ ಪದವಿ ಪ್ರಧಾನ



**ಚಳ್ಳಕೆರೆ :** ರಾಜ್ಯದ ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ಮಹಾವಿದ್ಯಾಲಯ ತನ್ನ 23ನೇ ಘಟಿಕೋತ್ಸವವನ್ನು ಆಚರಿಸಿಕೊಳ್ಳುವ ಸಂದರ್ಭದಲ್ಲಿ ಚಳ್ಳಕೆರೆನ ಬಿ.ಸಿ.ಕುಶಾಲಪ್ಪ, ಎಂ.ಪ್ರಭಾವತಿಯವರ ಪುತ್ರ ಸಿ.ಕೆ.ರಾಘವೇಂದ್ರ ಡಾಕ್ಟರೇಟ್ ಪದವಿಯನ್ನು ಪಡೆದಿರುತ್ತಾರೆ.

ಡಾ.ಕೆ.ಸಿ.ಶ್ರೀಕಂಠಯ್ಯ ಮಾರ್ಗದರ್ಶನದಲ್ಲಿ ವೈಯಕ್ತೀಕರಿಸಿದ ಶಿಫಾರಸ್ಸು ವ್ಯವಸ್ಥೆಗಾಗಿ ಹೈಬ್ರಿಡ್ ಮಾದರಿಗಳ ವಿನ್ಯಾಸ ಮತ್ತು ಕಾರ್ಯಕ್ಷಮತೆಯ ಮೌಲ್ಯಮಾಪನದ ಬಗ್ಗೆ ಮಂಡಿಸಿ ವಿಶೇಷ ಪ್ರಬಂಧಕ್ಕೆ ವಿಶ್ವವಿದ್ಯಾಲಯ ಡಾಕ್ಟರೇಟ್ ನೀಡಿ ಗೌರವಿಸಿದೆ.

ಸಿ.ಕೆ.ರಾಘವೇಂದ್ರರವರು ಡಾಕ್ಟರೇಟ್ ಪದವಿಗೆ ಭಾಜನರಾಗಿರುವುದಕ್ಕೆ ಮಡಿವಾಳ ಮಾಚೀದೇವ ಸಂಸ್ಥಾನದ ಸ್ವಾಮೀಜಿ ಡಾ.ಮಡಿವಾಳ ಮಾಚಿದೇವ ಸ್ವಾಮೀಜಿ, ಜಿಲ್ಲಾಧ್ಯಕ್ಷ ರಾಮಪ್ಪ, ತಾಲ್ಲೂಕು ಅಧ್ಯಕ್ಷ ಎನ್.ಮಂಜುನಾಥ, ಗೌರವಾಧ್ಯಕ್ಷ ನಾಗರಾಜು, ಉಪಾಧ್ಯಕ್ಷ ಪುಟ್ಟಲಿಂಗಪ್ಪ ಮುಂತಾದವರು ಸಂತಸ ವ್ಯಕ್ತಪಡಿಸಿದ್ದಾರೆ.

# ಮೃತ ಕುಟುಂಬಕ್ಕೆ ಒಂದು ಕೋಟಿ ಪರಿಹಾರ ಘೋಷಿಸಿ




**ಚಿತ್ರದುರ್ಗ :** ಕವಾಡಿಗರಪಟ್ಟಿ ಗ್ರಾಮ ಸೇರಿದಂತೆ ಎ.ಕೆ.ಕಾಲೋನಿಯ ಮಂಜುಳಮ್ಮ ಮತ್ತು ರಘು ಇವರ ಸಾವಿಗೆ ನಗರಸಭೆ ಸದಸ್ಯರು ಮತ್ತು ನಗರಸಭೆ ಅಧಿಕಾರಿ ಸಿಬ್ಬಂದಿಯನ್ನು ತನಿಖೆ ಗೊಳಪಡಿಸುವ ಜೊತಗೆ ಮೃತ ಕುಟುಂಬಕ್ಕೆ ತಲಾ ಒಂದು ಕೋಟಿ ಪರಿಹಾರ, ಕುಟುಂಬದ ಸದಸ್ಯರಿಗೆ ಸರ್ಕಾರಿ ಕೆಲಸ ನೀಡುವಂತೆ ಒತ್ತಾಯಿಸಿ ಕರುನಾಡ ವಿಜಯಸೇನೆ ವತಿಯಿಂದ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದರು.

ಚಿತ್ರದುರ್ಗ ನಗರದ ಕವಾಡಿಗರಹಟ್ಟಿ ಗ್ರಾಮ ಸೇರಿದಂತೆ ಎ.ಕೆ.ಕಾಲೋನಿಯ ದಲಿತ ಕುಟುಂಬ ಸರ್ವಣೀಯರು ಸೂಳೆಕೆರೆಯ ಶಾಂತಿಸಾಗರದಿಂದ ಬಿಡುವ ಕುಡಿಯುವ ನೀರಿನ ಸರಬರಾಜು ನೀರಿನಲ್ಲಿ ಕಲುಷಿತ ನೀರು ಕುಡಿದು, ಕವಾಡಿಗರಹಟ್ಟಿ ಗ್ರಾಮದ 23 ವರ್ಷದ ಮಂಜುಳಮ್ಮ, 27 ವರ್ಷದ ರಘು ಮೃತಪಟ್ಟಿರುತ್ತಾರೆ. ಈ ಬಡಾವಣೆಯ 500 ಮಕ್ಕಳ ತಪಾಸಣೆ ಮಾಡಿದ್ದು, ಈಗಾಗಲೇ 35 ಕ್ಕೂ ಹೆಚ್ಚು ಜನ ಅಸ್ವಸ್ಥಾಗಿದ್ದಾರೆ. 4 ಜನರ ಸ್ಥಿತಿ ಗಂಭೀರ ವಾಗಿದ್ದು, ಇದಕ್ಕೆ ನೇರ ಹೊಣೆ ನಗರಸಭೆ ಸದಸ್ಯ ಜಯಣ್ಣ, ಮತ್ತು ನಗರಸಭೆ ಪೌರಾಯುಕ್ತರು, ಕಂದಾಯಾಧಿಕಾರಿ, ಇಂಜಿನಿಯರ್ ಮತ್ತು ಆರೋಗ್ಯ ನಿರೀಕ್ಷಕ ಇವರುಗಳೇ ನೇರ ಹೊಣೆಗಾರರಾಗಿರುತ್ತಾರೆ.

ಜಯಣ್ಣ ಇದುವರೆಗೂ ಈ ವಾರ್ಡ್ ನ ಸಮಸ್ಯೆಗಳ ಬಗ್ಗೆ ತಿಳಿದುಕೊಳ್ಳದೇ, ಉದಾಸೀನ ನಿರ್ಲಕ್ಷ್ಯತೆಯಿಂದ ಈ ಘಟನೆ ನಡೆದಿದೆ ಎಂದು ಆರೋಪಿಸಿದರು. ಇದುವರೆಗೂ ಈ ವಾರ್ಡ್ ಟ್ಯಾಂಕುಗಳ ಸ್ವಚ್ಚತೆ ಬಗ್ಗೆ, ಚರಂಡಿ ಸ್ವಚ್ಚತೆ ಬಗ್ಗೆ, ಯು.ಜಿ.ಡಿ, ಪೈಪ್ ಲೈನ್‌ಗಳ ಬಗ್ಗೆಯಾಗಲೀ ಯಾವುದೇ ಸಮಸ್ಯೆಗಳ ಪರಿಶೀಲಿಸಿ ಸರಿಪಡಿಸುವ ಗೋಜಿಗೆ ಹೋಗಿರುವುದಿಲ್ಲ. ಈ ಘಟನೆಗೆ ಸಂಬಂಧಿಸಿದ ನಗರಸಭೆ ಅಧಿಕಾರಿಗಳು ಮತ್ತು ಸಿಬ್ಬಂದಿ ವಿರುದ್ಧ ಸುಮೋಟೋ ಕೇಸ್ ದಾಖಲಿಸಿ, ಸಿ.ಓ.ಡಿ. ತನಿಖೆ ಆಗಬೇಕು.

ಈ ಸಂದರ್ಭದಲ್ಲಿ ಕರುನಾಡ ವಿಜಯಸೇನೆ ಜಿಲ್ಲಾಧ್ಯಕ್ಷ ಕೆ.ಟಿ.ಶಿವಕುಮಾರ್, ಮಹಿಳಾ ಜಿಲ್ಲಾ ಅಧ್ಯಕ್ಷೆ ವೀಣಾ ಗೌರಣ್ಣ, ಗ್ರಾಮಂತರ ಅಧ್ಯಕ್ಷೆ ಕಮಲಮ್ಮ, ಮಣಿಕಂಠ, ಪ್ರದೀಪ್ , ಅವಿನಾಶ್, ಅಖಿಲೇಶ್, ವಿಶ್ವನಾಥ ಮೂರ್ತಿ ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

**ಇಂದಿನ ಚಿನ್ನ ಮತ್ತು ಬೆಳ್ಳಿ ದರಗಳು : 91.6 Kdm- 5540/gm | 85 kdam - 5140/gm | ಬೆಳ್ಳಿ : 67000 / ಕೆಜಿ**

## ಫಾಸ್ಟ್ ನ್ಯೂಸ್

### ಮೊಬೈಲ್ ಚಾರ್ಜರ್ ವಿದ್ಯುತ್ ಶಾಖ್ : ಮಗು ಸಾವು

**ನಮ್ಮ ಜನ ವಾರ್ತೆ ಉತ್ತರ ಕನ್ನಡ :** ಕಾರವಾರ ತಾಲೂಕಿನ ಸಿದ್ದರ ಗ್ರಾಮದಲ್ಲಿ ಮೊಬೈಲ್ ಚಾರ್ಜರ್ ವೈರ್‌ನಿಂದ ವಿದ್ಯುತ್ ಪ್ರವಹಿಸಿ ಮಗು ಸಾವನ್ನಪ್ಪಿದೆ. ಸಂಜನಾ ದಂಪತಿಯ 8 ತಿಂಗಳ ಹೆಣ್ಣು ಮಗು ಇದಾಗಿದ್ದು, ಮೊಬೈಲ್ ಚಾರ್ಜ್‌ಗೆ ಹಾಕಿ ಪೋಷಕರು ಆಫ್ ಮಾಡದೇ ಇಟ್ಟಿದ್ದರು. ಈ ವೇಳೆ ಆನ್ ಇದ್ದ ಚಾರ್ಜರ್‌ನ್ನು ಮಗು ಬಾಯಲ್ಲಿಟ್ಟುಕೊಂಡಿದ್ದು ಕೂಡಲೇ ಶಾಕ್‌ನಿಂದ ಕೊನೆಯುಸಿರೆಳದಿದೆ.

### ಇನ್ಸ್‌ಪೆಕ್ಟರ್‌ಗಳ ವರ್ಗಾವಣೆಗೆ ತಡೆ

**ನಮ್ಮ ಜನ ವಾರ್ತೆ ಬೆಂಗಳೂರು :** ನಿನ್ನೆ ವರ್ಗಾವಣೆಗೊಂಡಿದ್ದ ಕೆಲ ಇನ್ಸ್‌ಪೆಕ್ಟರ್‌ಗಳ ವರ್ಗಾವಣೆಗೆ ಸರ್ಕಾರ ತಡೆ ಹಿಡಿದಿದೆ. ನಿನ್ನೆ 211 ಇನ್ಸ್‌ಪೆಕ್ಟರ್‌ಗಳ ವರ್ಗಾವಣೆ ಮಾಡಿ ಸರ್ಕಾರ ಆದೇಶಿಸಿತ್ತು. ಇಂದು ಬೆಳಗ್ಗೆ ಸರ್ಕಾರದಿಂದ ದಿಢೀರ್ ತಡೆ ಹಿಡಿಯಲಾಗಿದೆ.

### ನಂದಿನಿ ಪಾರ್ಲರ್‌ಗೆ ಹೊಸ ದರದ ಹಾಲು

**ನಮ್ಮ ಜನ ವಾರ್ತೆ ಬೆಂಗಳೂರು :** ರಾಜ್ಯ ಸರ್ಕಾರ ಹಾಲಿನ ದರ ಏರಿಸಿದ ಬಳಿಕ ಇದೀಗ ನಂದಿನಿ ಪಾರ್ಲರ್?ಗೆ ಹೊಸ ದರದ ಹಾಲು, ಮೊಸರು, ಮಜ್ಜಿಗೆ ಬಂದಿದೆ. ನಿನ್ನೆ (ಆ.1) ಹೊಸ ದರದ ಪ್ಯಾಕೆಟ್ ಇರಲಿಲ್ಲ. ಹಳೆಯ ದರದ ಪ್ಯಾಕೆಟ್ ಮಾರಾಟ ಮಾಡ್ತಿದ್ದೀರಾ ಎಂದು ಗ್ರಾಹಕರು ಕಿರಿಕ್ ಮಾಡಿದ್ದರು. ಈ ಹಿನ್ನೆಲೆಯಲ್ಲಿ ಇಂದು ( ಆ.2) ಬೆಳಗ್ಗಿನಿಂದಲೇ ಹೊಸ ದರದ ಹಾಲು, ಮೊಸರು, ಮಜ್ಜಿಗೆ ಹಾಗೂ ಲಸ್ಸಿ ಬಂದಿದೆ. ಅರ್ಧ ಲೀಟರ್ ಹಾಲಿಗೆ ಹಿಂದೆ 20 ರೂಪಾಯಿ ಇತ್ತು. ಈಗ 22 ರೂಪಾಯಿ ಆಗಿದೆ. ಗ್ರಾಹಕರು 50 ಅಥವಾ 100 ರೂಪಾಯಿ ನೋಟು ಕೊಡುತ್ತಾರೆ. ಇದರಿಂದ ಚಿಲ್ಲರೆ ಕೊಡುವುದು ನಮಗೆ ಸಮಸ್ಯೆಯಾಗಿದೆ ಎಂದು ನಂದಿನಿ ಪಾರ್ಲರ್ ಮಾಲೀಕ ರವೀಶ್ ಹೇಳಿದ್ದಾರೆ.

### ಹಂಪಿ ಕನ್ನಡ ವಿ.ವಿ. ವಿಶ್ರಾಂತ ಕುಲಪತಿ ವಿರುದ್ಧ ಕೇಸು

**ನಮ್ಮ ಜನ ವಾರ್ತೆ ವಿಜಯನಗರ :** ಹಂಪಿ ಕನ್ನಡ ವಿಶ್ವವಿದ್ಯಾಲಯದ ವಿಶ್ರಾಂತ ಕುಲಪತಿ ಡಾ. ಮಲ್ಲಿಕಾಘಂಟಿ ವಿರುದ್ಧ FIR ದಾಖಲಾಗಿದೆ. ವಿಶ್ವವಿದ್ಯಾಲಯಕ್ಕೆ ಆರ್ಥಿಕ ನಷ್ಟ ಉಂಟು ಮಾಡಿದ್ದು, ಉದ್ದೇಶಪೂರ್ವಕವಾಗಿ KTPP ಕಾಯ್ದೆ ಉಲ್ಲಂಘನೆ ಮಾಡಿದ್ದಾರೆ ಎಂಬ ಅರೋಪದ ಮೇಲೆ, ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಸಚಿವ ಸುಬ್ಬಣ್ಣ ರೈ ಅವರು ಕಮಲಾಪುರ ಪೊಲೀಸ್ ಠಾಣೆಗೆ ದೂರು ದಾಖಲಿಸಿದ್ದಾರೆ.

### ಕಾಂಗ್ರೆಸ್ ಹೈಕಮಾಂಡ್ ಟಾರ್ಗೆಟ್ ಫಿಕ್ಸ್

**ನಮ್ಮ ಜನ ವಾರ್ತೆ ಬೆಂಗಳೂರು :** ಲೋಕಸಭಾ ಚುನಾವಣೆಗೆ ಕಾಂಗ್ರೆಸ್ ಸಜ್ಜುಗೊಳ್ಳತ್ತಿದೆ. ಕರ್ನಾಟಕದಲ್ಲಿ 20 ಲೋಕಸಭಾ ಕ್ಷೇತ್ರಗಳನ್ನು ಗೆಲ್ಲಲು ಕಾಂಗ್ರೆಸ್ ಹೈಕಮಾಂಡ್ ಟಾರ್ಗೆಟ್ ಫಿಕ್ಸ್ ಮಾಡಿದೆ. ಹೀಗಾಗಿ ಇಂದು(ಆ.2) ರಾಜ್ಯ ನಾಯಕರ ಜೊತೆ ಹೈಕಮಾಂಡ್ ನಾಯಕರು ಮಹತ್ವದ ಸಭೆ ನಡೆಸಲಿದ್ದಾರೆ. ಜೊತೆಗೆ ರಾಜ್ಯ ನಾಯಕರ ನಡುವಿನ ಅಸಮಧಾನದ ಬೇಗುದಿಗೂ ಹೈಕಮಾಂಡ್ ಮದ್ದು ಅರೆಯಲಿದೆ.

## ತಂಬಾಕು ಉತ್ಪನ್ನಗಳ ಅಂಗಡಿಗಳಿಗೆ ದಾಳಿ



**ಚಿತ್ರದುರ್ಗ :** ಜಿಲ್ಲಾ ಆರೋಗ್ಯಾಧಿಕಾರಿ ಡಾ.ಆರ್.ರಂಗನಾಥ್ ಹಾಗೂ ಜಿಲ್ಲಾ ತಂಬಾಕು ನಿಯಂತ್ರಣಾಧಿಕಾರಿ ಡಾ.ಎನ್.ಕಾಶೀ ಅವರ ಮಾರ್ಗದರ್ಶನದಲ್ಲಿ ಕೋಟ್ಪಾ-2003ರ ಕಾಯ್ದೆಯ ಕುರಿತು ಸೋಮವಾರ ಚಿತ್ರದುರ್ಗ ನಗರ ಪ್ರದೇಶಗಳಲ್ಲಿ ತನಿಖಾ ತಂಡವು ತಂಬಾಕು ಉತ್ಪನ್ನಗಳ ಮಾರಾಟಗಾರರ ಅಂಗಡಿಗಳಿಗೆ ದಾಳಿ ಮಾಡಿ ದಂಢ ವಿಧಿಸಿದೆ.

ಸಂಬಂಧಪಟ್ಟ ಸೆಕ್ಷನ್-4, 6ಎ ಮತ್ತು 6ಬಿ ಬೋರ್ಡ್‌ಗಳನ್ನು ಹಾಕಲು ಸೂಚಿಸಲಾಯಿತು. ಮತ್ತು ಸೆಕ್ಷನ್-4 ಅಡಿಯಲ್ಲಿ 02 ಕೇಸುಗಳನ್ನು ದಾಖಲಿಸಿ ರೂ. 200 ದಂಡ ಮತ್ತು ಸೆಕ್ಷನ್-6ಬಿ ಅಡಿಯಲ್ಲಿ 04 ಕೇಸುಗಳನ್ನು ದಾಖಲಿಸಿ ರೂ. 400 ದಂಡ ವಸೂಲಿ ಮಾಡಲಾಯಿತು. ತಾಲ್ಲೂಕು ಮಟ್ಟದ ತನಿಖಾ ತಂಡದ ಅಧಿಕಾರಿಗಳಾದ ಬಿ. ಶ್ರೀಧರ, ಗುರುಮೂರ್ತಿ, ರಂಗಸ್ವಾಮಿ, ಡಾ. ಗೋವರ್ಧನ್ ಗೋಪಾಲ್, ಸಾಜೀದಾ, ಜಯರಾಮ್ ಇದ್ದರು.

ಪ್ರಮುಖ ಸುದ್ದಿ

# ಕೆರೆಗಳಿಗೆ ನೀರು ತುಂಬಿಸುವ ಅಧಿಕಾರ ನಮ್ಮಲ್ಲಿ ಇರಲಿ : ಶಾಸಕ ಬಿ.ಜಿ.ಗೋವಿಂದಪ್ಪ

**ಹೊಸದುರ್ಗ :** ನಮ್ಮ ತಾಲೂಕಿನ ಎಲ್ಲಾ ಕೆರೆಗಳಿಗೂ ನೀರು ತುಂಬಿಸುವ ಅಧಿಕಾರ ನಮ್ಮ ಉಪ ವಿಭಾಗದಲ್ಲಿಯೇ ಇರಬೇಕು ಬೇರೆ ತಾಲೂಕಿನ ವಿಭಾಗಗಳಿಗೆ ನೀಡಬೇಡಿ ಎಂದು ಶಾಸಕ ಬಿ.ಜಿ ಗೋವಿಂದಪ್ಪ ಭದ್ರಾ ಯೋಜನೆಯ ಹೊಸದುರ್ಗ ಉಪವಿಭಾಗದ ಎಇಇ ಸುರೇಶ್ ಅವರಿಗೆ ಸೂಚಿಸಿದರು.

ಪಟ್ಟಣದ ತಾಪಂ ಸಭಾಂಗಣದಲ್ಲಿ ಮಂಗಳವಾರ ಶಾಸಕ ಬಿಜಿ ಗೋವಿಂದಪ್ಪ ಅವರ ಅಧ್ಯಕ್ಷತೆಯಲ್ಲಿ ನಡೆದ 1 ನೇ ತ್ರೈಮಾಸಿಕ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಬಲ್ಲಾಳಸಮುದ್ರ ಕೆರೆ ಸೇರಿದಂತೆ ಮತ್ತೋಡು ಹೋಬಳಿಯ ಕೆಲ ಕೆರೆಗಳಿಗೆ ನೀರು ತುಂಬಿಸುವ ಯೋಜನೆ ಕಾಮಗಾರಿ ಪಕ್ಕದ ತಾಲೂಕುಗಳಾದ ಕಡೂರು, ಚಿಕ್ಕನಾಯಕನಹಳ್ಳಿ ಹಾಗೂ ಹಿರಿಯೂರು ಉಪ ವಿಭಾಗಗಳಿಗೆ ಸೇರಿವೆ ಇದರಿಂದ ಆ ಕೆಲಸಗಳು ಸರಿಯಾಗಿ ನಡೆಯುವುದಿಲ್ಲ ಎಂದರು.

ವಿವಿಸಾಗರ ಡ್ಯಾಂನ ಕೋಡಿ ಕಡಿಮೆ ಮಾಡಿ ಎಂದರೆ ಹಿರಿಯೂರು ರೈತರು ಜಗಳಕ್ಕೆ ಬರುತ್ತಾರೆ. ಡ್ಯಾಂಗೆ ನೀರಿನ ಒಳ ಹರಿವು ಹೆಚ್ಚಾದರೆ ನಮ್ಮ ಭಾಗದ ಡ್ಯಾಂ ಹಿನ್ನೀರಿನ ರೈತರು ಬೆಳೆ ಕಳೆದುಕೊಂಡು ಕಣ್ಣೀರು ಹಾಕುತ್ತಾರೆ. ಇದಕ್ಕೆ ಶಾಶ್ವತ ಪರಿಹಾರ ನೀಡಲು ಅಧಿಕಾರಿಗಳು ರೈತರು ಹಾಗೂ ಚುನಾಯಿತ ಪ್ರತಿನಿಧಿಗಳ ಸಭೆ ಕರೆಯಿರಿ ಅವರು ಡ್ಯಾಂ ಗೆ ಕೇವಲ ವೇದಾವತಿ ನದಿ ನೀರು ಮಾತ್ರ ಬರಲ್ಲ ಅದಕ್ಕೆ ಗಂಜಿಗೆರೆ ಒಡ್ಡು, ದೇವಪುರದ ಹಳ್ಳ, ಗುಂಡಿ ಹಳ್ಳ, ಮಾದರ ಹಳ್ಳದ ನೀರು ಬರುತ್ತವೆ ನೀವು ಕೇವಲ ವೇದಾವತಿ ನದಿಯ ನೀರಿನ ಪ್ರಮಾಣವನ್ನು ಮಾತ್ರ ಅಳತೆ ಮಾಡುತ್ತೀರಾ ಹಳ್ಳದಿಂದ ಬರುವ ನೀರಿನ ಅಳತೆ ಮಾಡುತ್ತೀರಾ ಎಂದು ಪ್ರಶ್ನಿಸಿದರು.




**ಸಮದಾಯ ಭವನದ ನಿರ್ವಹಣೆ ಸಮುದಾಯಗಳಿಗೆ ನೀಡಿ :** ಪಟ್ಟಣದ ಪುರದ ರಸ್ತೆಯಲ್ಲಿ ನಿರ್ಮಿಸಲಾಗಿರುವ ಸಮುದಾಯ ಭವನಗಳನ್ನು ಸಂಭಂದಿಸಿದ ಸಮುದಾಯಗಳ ಅಧ್ಯಕ್ಷರು ಹಾಗೂ ಮುಖಂಡರನ್ನು ಕರೆದು ಸಭೆ ನಡೆಸಿ ಅವುಗಳ ನಿರ್ವಹಣೆಯನ್ನು ಅವರಿಗೆ ಹಸ್ತಾಂತರಿಸಿ ನೀವು ಬೀಗ ಹಾಕಿಕೊಂಡಿದ್ದೀರಾ ಇದ-ರಿಂದ ಆ ಸಮುದಾಯಗಳಿಗೇನು ಅನುಕೂಲ ಎಂದು ಸಮಾಜ ಕಲ್ಯಾಣ ಇಲಾಕೆ ಅಧಿಕಾರಿ ಕಾಳಮ್ಮ ಅವರನ್ನು ಪೃಶ್ನಿಸಿದರು.

ಅಧಿಕಾರಿ ಮಾಡುವ ತಪ್ಪಿಗೆ ಗ್ರಾಮಸ್ಥರು ಹೊಡೆದಾಡಬೇಕಾ? ಅಧಿಕಾರಿಗಳು ಮಾಡುವ ತಪ್ಪಿಗೆ ಮೂರು ಗ್ರಾಮಗಳ ಜನ ಹೊಡೆದಾಡುವಂತಾಗಿದೆ. ಕೆರೆ ಹರಾಜು ಹಾಕುವಾಗ ಸಾರ್ವಜನಿಕವಾಗಿ ಪ್ರಚಾರ ಮಾಡಬೇಕು ಯಾವುದೋ ಒಂದು ಸಂಘದವರು ಅರ್ಜಿ ಹಾಕಿದರು ಎಂದು ಅವರಿಗೆ ಮೀನು ಸಾಕಾಣಿ-ಕೆಗೆ ಅವಕಾಶ ನೀಡಿದ್ದೀರಾ ಇದ-ರಿಂದ ಆ ಬಾಗದ 3 ಗ್ರಾಮಗಳ ಜನ ಹೊಡೆದಾಡಿಕೊಳ್ಳುವಂತಹ ವಾತಾವರಣ ಸೃಷ್ಟಿ ಮಾಡಿದ್ದೀರಾ. ನೀವು ಮಾಡಿರುವ ತಪ್ಪನ್ನು ಸರಿಪಡಿಸಿಕೊಳ್ಳಿ ನಿಮ್ಮ ತಪ್ಪಿನಿಂದ ಜನ ಹೊಡೆದಾಡಿಕೊಂಡು ಕೋರ್ಟ್‌ಗೆ ಅಲೆಯುವಂತೆ ಮಾಡಬೇಡಿ ಮೀನುಗಾರಿಕೆ ಇಲಾಖೆ ಅಧಿಕಾರಿ ಮಂಜುನಾಥ್ ಗೆ ಸೂಚಿಸಿದರು.

**ತಾಲೂಕಿನಲ್ಲಿ 58356 ಅತ್ಯೋದಯ ಹಾಗೂ ಬಿಪಿಎಲ್ ಕಾರ್ಡುದಾರರಿದ್ದು 1661 ಎಪಿಎಲ್ ಕಾರ್ಡುದಾರರು ಇದ್ದಾರೆ . ಈಗಾಗಲೇ ನಗರ ಪ್ರದೇಶದಲ್ಲಿ 3056ಹಾಗೂ ಗ್ರಾಮೀಣ ಬಾಘದಲ್ಲಿ 42075ಒಟ್ಟು 45131 ಕಾರ್ಡುದಾರರು ಗೃಹ ಲಕ್ಷ್ಮಿ ಯೋಜನೆಗೆ ನೊಂದಣಿ ಮಾಡಿಕೊಂಡಿದ್ದಾರೆ ಉಳಿದವರನ್ನು ಇನ್ನರೆಡು ದಿನಗಳಲ್ಲಿ ನೊಂದಣಿ ಮಾಡಿಸುತ್ತೇನೆ – ಅಭಿಲಾಷ ಸಿಡಿಪಿಓ.**

**10 ವರ್ಷದ ಕಾಮಗಾರಿ ವಿವರ ನೀಡಿ :** ಕಾಮಗಾರಿ ಮುಗಿದು 10 ವರ್ಷ ಆದರೂ ಹಣ ನೀಡದಿದ್ದರೆ ಕೆಲಸ ಮಾಡಿದ ಗುತ್ತಿಗೆದಾರ ಏನಾಗಬೇಕು ಇಲಾಖೆ ಆಧಿಕಾರಿಗಳು ಹಾಗೂ ಕೆಲಸ ನಿರ್ವಹಿಸುವ ಏಜೆನ್ಸಿಯವರ ನಡುವೆ ಸಮನ್ವಯತೆ ಇರಬೇಕು ಈ ಬಗ್ಗೆ ತಾಲೂಕು ಮಟ್ಟದ ಅಧಿಕಾರಿಗಳು ಕಳೆದ 10 ವರ್ಷದಲ್ಲಿ ಯಾವ ಯೋಜನೆಯಲ್ಲಿ ಯಾವ ಕಾಮಗಾರಿಗೆ ಎಷ್ಟು ಅನುದಾನ ಬಂದಿದೆ. ಎಷ್ಟು ಖರ್ಚಾಗಿದೆ. ಇನ್ನೂ ಎಷ್ಟು ಹಣ ಬರಬೇಕು ಎಂಬುದರ ಬಗ್ಗೆ ಸಂಪೂರ್ಣ ಮಾಹಿತಿಯನ್ನು ಇನ್ನೆರಡು ದಿನಗಳಲ್ಲಿ ನೀಡಿ ಎಂದರು.

ಸಭೆಯಲ್ಲಿ ತಾಪಂ ಆಡಳಿತಾಧಿಕಾರಿ ಶಂಕರಪ್ಪ, ತಹಶೀಲ್ದಾರ್ ಪಾಲಯ್ಯ, ತಾಪಂ ಇಓ ಸುನಿಲ್‌ಕುಮಾರ್ ಸೇರಿದಂತೆ ತಾಲೂಕು ಮಟ್ಟದ ಅಧಿಕಾರಿಗಳು ಹಾಜರಿದ್ದರು.

# ಪಾಠದ ಜೊತೆ ಆಟಕ್ಕೂ ಮಕ್ಕಳು ಹೆಚ್ಚಿನ ಒತ್ತು ಕೊಡಿ : ಶಾಸಕ ಚಂದ್ರಪ್ಪ

**ಹೊಳಲ್ಕೆರೆ :** ಪಾಠದ ಜೊತೆ ಆಟಕ್ಕೂ ಮಕ್ಕಳು ಹೆಚ್ಚಿನ ಒತ್ತು ಕೊಟ್ಟಾಗ ಮಾನಸಿಕ ಹಾಗೂ ದೈಹಿಕವಾಗಿ ಆರೋಗ್ಯವಂತರಾಗಿರಬಹುದೆಂದು ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು.

ಹೊಳಲ್ಕೆರೆ ವಿಧಾನಸಭಾ ಕ್ಷೇತ್ರದ ಭರಮಸಾಗರದಲ್ಲಿ ಶಿಕ್ಷಣ ಇಲಾಖೆ ವತಿಯಿಂದ ಆಯೋಜಿಸಲಾಗಿದ್ದ ಭರಮಸಾಗರ ಹೋಬಳಿ ಮಟ್ಟದ 2023-24 ನೇ ಸಾಲಿನ ಕ್ರೀಡಾಕೂಟ ಉದ್ಘಾಟಿಸಿ ನಂತರ ನಾಲ್ಕು ನೂತನ ಶಾಲಾ ಕೊಠಡಿಗಳ ಕಟ್ಟಡ ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಿ ಮಾತನಾಡಿದರು.

ಕ್ರಿಕೇಟ್ ಇನ್ನಿತರೆ ಕ್ರೀಡೆಗೆ ಪ್ರಪಂಚದಾದ್ಯಂತ ಹೆಚ್ಚಿನ ಮಾನ್ಯತೆಯಿದೆ. ಅದೇ ಗ್ರಾಮೀಣ ಕ್ರೀಡೆಗಳಿಗೆ ಪ್ರೋತ್ಸಾವಿಲ್ಲ. ಅದಕ್ಕಾಗಿ ಮಕ್ಕಳು ದೇಸಿ ಕ್ರೀಡೆಗಳಲ್ಲಿ ಪಾಲ್ಗೊಳ್ಳುವ ಮೂಲಕ ಗುರು-ಹಿರಿಯರು ಹಾಗೂ ಪೋಷಕರುಗಳಿಗೆ ಕೀರ್ತಿ ತರಬೇಕು. ಇಡಿ ಚಿತ್ರದುರ್ಗ ಜಿಲ್ಲೆಯಲ್ಲಿಯೇ ಐ.ಟಿ.ಐ. ಕಾಲೇಜು ಇಲ್ಲದಂತ ಸಂದರ್ಭದಲ್ಲಿ 1995 ರಲ್ಲಿ ಭರಮಸಾಗರದಲ್ಲಿ ಐ.ಟಿ.ಐ. ಕಾಲೇಜನ್ನು ಆರಂಭಿಸಿ ಅತ್ಯುತ್ತಮ ಉಪಕರಣಗಳನ್ನು ಒದಗಿಸಲಾಗಿತ್ತು. ಸ್ಪರ್ಧಾತ್ಮಕ ಯುಗದಲ್ಲಿ ಶಿಕ್ಷಣದ ಕಡೆ ಗಮನ ಕೊಡಿ. ಜೊತೆಗೆ ಕ್ರೀಡೆಯಲ್ಲೂ ಪಾಲ್ಗೊಳ್ಳಿ. ಈಗಾಗಲೆ ಕೆಲವು ಸರ್ಕಾರಿ ಶಾಲೆಗಳಲ್ಲಿ ಸ್ವಂತ ಖರ್ಚಿನಿಂದ ಬಸ್‌ಗಳ ವ್ಯವಸ್ಥೆ ಮಾಡಿದ್ದೇನೆ. ಇದರಿಂದ ಬಡ ಮಕ್ಕಳ ಶಿಕ್ಷಣಕ್ಕೆ ಅನುಕೂಲವಾಗಲಿದೆ. ಮುಂದಿನ ದಿನಗಳಲ್ಲಿ ಭರಮಸಾಗರ ಸುತ್ತಮುತ್ತ ಮಕ್ಕಳು ಸರ್ಕಾರಿ ಶಾಲೆಗಳಿಗೆ ಹೋಗಲು ಬಸ್ ವ್ಯವಸ್ಥೆ ಕಲ್ಪಿಸಲಾಗುವುದೆಂದು ಭರವಸೆ ನೀಡಿದರು.

ಬಿ.ಎಸ್.ಯುಡಿಯೂರಪ್ಪನವರು ರಾಜ್ಯದ ಮುಖ್ಯಮಂತ್ರಿಯಾಗಿದ್ದಾಗ ಎಲ್ಲಾ ಪ್ರಾಥಮಿಕ ಶಾಲೆಗಳಿಗೆ ದೈಹಿಕ ಶಿಕ್ಷಕರನ್ನು ನೇಮಿಸಲಾಗಿತ್ತು. ಶಿಕ್ಷಣದಿಂದ ಮಾತ್ರ ನಿಮ್ಮ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬಹುದು ಎಂದು ಹೇಳಿದರು.



**ಭರಮಸಾಗರದಲ್ಲಿ ಹೋಬಳಿ ಮಟ್ಟದ ಕ್ರೀಡಾಕೂಟಕ್ಕೆ ಶಾಸಕ ಡಾ.ಎಂ.ಚಂದ್ರಪ್ಪನವರಿಂದ ಚಾಲನೆ**

ಚಿತ್ರದುರ್ಗ ಕ್ಷೇತ್ರ ಶಿಕ್ಷಣಾಧಿಕಾರಿ ಶ್ರೀಮತಿ ಗಿರಿಜ, ಗ್ರಾಮ ಪಂಚಾಯಿತಿ ಅಧ್ಯಕ್ಷೆ ಶ್ರೀಮತಿ ಮಂಜುಳಮ್ಮ, ಎಸ್.ಎಂ.ಎಲ್. ತಿಪ್ಪೇಸ್ವಾಮಿ, ಡಿ.ಎಸ್.ಪ್ರವೀಣ್‌ಕುಮಾರ್, ಪರಶುರಾಮಪ್ಪ, ಚಿದಾನಂದಸ್ವಾಮಿ, ಎಲ್.ಸಿ.ಮಂಜುನಾಥ್, ಕಲ್ಲೇಶ್, ಚಂದ್ರಶೇಖರ್, ಮುಖ್ಯ ಶಿಕ್ಷಕರು ಹಾಗೂ ಶಿಕ್ಷಕ ವೃಂದದವರು ಈ ಸಂದರ್ಭದಲ್ಲಿ ಹಾಜರಿದ್ದರು.

# ವಿಶ್ವ ಸ್ತನ್ಯಪಾನ ಸಪ್ತಾಹ ದಿನಾಚರಣೆ ಕಾರ್ಯಕ್ರಮ

**ನಮ್ಮ ಜನ ವಾರ್ತೆ ದಾವಣಗೆರೆ :** ಮಗವನ್ನು ನ್ಯೂಮೋನಿಯಾ ಅತೀಸಾರ ಭೇದಿ ಅಪೌಷ್ಟಿಕತೆ ಇವುಗಳಿಂದ ತಡೆಗಟ್ಟಲು ಸ್ತನ್ಯಪಾನವು ಅತ್ಯಂತ ಮಹತ್ವಪೂರ್ಣ ಪಾತ್ರವಹಿಸುತ್ತದೆ ಎಂದು ತಾಲ್ಲೂಕು ಆರೋಗ್ಯಾಧಿಕಾರಿ ಡಾ. ದೇವರಾಜ ಪಿ ಪಟಗೆ ತಿಳಿಸಿದರು.

ಬುಧವಾರ ಭಾಷಾ ನಗರದಲ್ಲಿರುವ ಪ್ರಸೂತಿ ಆರೈಕೆ ಕೇಂದ್ರದಲ್ಲಿ ಜರುಗಿದ ವಿಶ್ವ ಸ್ತನ್ಯಪಾನ ಸಪ್ತಾಹ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿ ಹೆರಿಗೆ ಪ್ರಮಾಣ ಹೆಚ್ಚಾಗಿದ್ದರೂ ಸಹ ತಾಯಿ ಮಗುವಿಗೆ ಎದೆ ಹಾಲು ಕುಡಿಸುವ ಪ್ರಮಾಣ ಕಡಿಮೆ ಆಗಿದೆ. ಮಗುವಿಗೆ 6 ತಿಂಗಳವರೆಗೆ ಕೇವಲ ಎದೆ ಹಾಲನ್ನು ಮಾತ್ರ ಉಣಿಸಬೇಕು. ಇದರಿಂದ ಶಿಶುಗಳಿಗೆ ಬರುವಂತಹ ಸೋಂಕು ರೋಗಗಳನ್ನು ತಡೆಗಟ್ಟಿ, ಶಿಶು ಮರಣಗಳನ್ನು ತಪ್ಪಿಸಬಹುದು ಎಂದರು.



ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಹೆಚ್.ಉಮಾಪತಿ ಎಲ್ಲಾ ತಾಯಂದಿರಿಗೆ ಸ್ತನ್ಯ ಪಾನವನ್ನು ಬೆಂಬಲಿಸುವಂತೆ "ನಮ್ಮ ಆಸ್ಪತ್ರೆಯಲ್ಲಿ ಹೆರಿಗೆ ಸೇವೆಗಳಿಗೆ ದಾಖಲಾಗುವ ಎಲ್ಲಾ ತಾಯಂದಿರಿಗೂ ಸ್ತನ್ಯ ಪಾನವನ್ನು ಸಕ್ರಿಯವಾಗಿ ಬೆಂಬಲಿಸಲು ನಾನು ಬದ್ಧನಾಗಿರುತ್ತೇನೆ. ನಮ್ಮ ಆಸ್ಪತ್ರೆಯಲ್ಲಿ ಸ್ತನ್ಯಪಾನವನ್ನು ರಕ್ಷಿಸಲು ಉತ್ತೇಜಿಸಲು ಮತ್ತು ಬೆಂಬಲಿಸಲು ನನ್ನ ಕಡೆಯಿಂದ ಸಾಧ್ಯವಿರುವ ಎಲ್ಲಾ ಪ್ರಯತ್ನವನ್ನು ಮಾಡುತ್ತೇನೆ. ಪ್ರಸವ ನಂತರದ ಆರೈಕೆಯಲಿ ?ಲಆಸ್ಪತ್ರೆಯಲ್ಲಿದ್ದಾಗ ಕಡ್ಡಾಯವಾಗಿ 6 ತಿಂಗಳು ಸಂಪೂರ್ಣ ಸ್ತನ್ಯಪಾನವನ್ನು ಅಭ್ಯಾಸ ಮಾಡಲು ತಾಯಂದಿರಿಗೆ ಬೆಂಬಲ ನೀಡುತ್ತೇನೆ ಎಂಬ ಪ್ರತಿಜ್ಞೆಯನ್ನು ಭೋಧಿಸಿದರು.

ಪ್ರಸೂತಿ ವೈದ್ಯಾಧಿಕಾರಿ ಡಾ. ರೇಖಾ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವೆಂಕಟಾಚಲ ಕುಮಾರ್ .ಟಿ.ಎಸ್, ಆರೋಗ್ಯ ಸಿಬ್ಬಂದಿಗಳು ಹಾಗೂ ಆಶಾ ಕಾರ್ಯಕತೆ-ಯರು ಉಪಸ್ಥಿತರಿದ್ದರು.

# ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವಿಶ್ವ ಹೆಪಟೈಟಿಸ್ ದಿನಾಚರಣೆ

**ನಮ್ಮ ಜನ ವಾರ್ತೆ ದಾವಣಗೆರೆ :** ಯಕೃತ್ತಿನಲ್ಲಿ ಉರಿಯೂತವನ್ನು ಉಂಟುಮಾಡುವ ಲಕ್ಷಣಗಳು ಅಥವಾ ರೋಗಗಳಿಗೆ ಹೆಪಟೈಟಿಸ್ ಎಂದು ಹೇಳಲಾಗುತ್ತದೆ. ಈ ಉರಿಯೂತ ಸತತ ಮದ್ಯಪಾನ ಸೇವನೆಯಿಂದ ಅಥವಾ ವೈರಸ್‌ಗಳಿಂದ ಹರಡುತ್ತದೆ ಎಂದು ಆಡಳಿತ ವೈದ್ಯಾಧಿಕಾರಿಗಳಾದ ವೆಂಕಟೇಶ್ ಎಲ್.ಡಿ ತಿಳಿಸಿದರು.

ಶುಕ್ರವಾರ ಕಕ್ಕರಗೊಳ್ಳದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಜರುಗಿದ ವಿಶ್ವಹೆಪಟೈಟಿಸ್ ದಿನಾಚರಣೆಯನ್ನು ಉದ್ದೇಶಿಸಿ ಅವರು ಮಾತನಾಡಿದರು. ಹೆಪಟೈಟಿಸ್ ವೈರಸ್‌ಗಳು ಹೆಚ್ಚು ಅಪಾಯಕಾರಿಯಾಗಿದ್ದು, ಹಲವು ವರ್ಷಗಳ ವರೆಗೆ ರೋಗದ ಯಾವುದೇ ಲಕ್ಷಣಗಳನ್ನು ತೋರ್ಪಡಿಸಿವುದಿಲ್ಲ ಆದ್ದರಿಂದ ಜಾಗೃತರಾಗಿ ಮುಂಚಿತವಾಗಿಯೇ ಲಸಿಕೆಯನ್ನು ಹಾಕಿಸಿಕೊಳ್ಳಬೇಕು ಎಂದು ಹೇಳಿದರು.

ಹೆಪಟೈಟಿಸ್ ವೈರಸ್‌ಗಳನ್ನು ಹೆಪಟೈಟಿಸ್ ಎ.ಬಿ.ಸಿ ಎಂದು ಗುರುತಿಸಲಾಗುವುದು. ಆಸ್ಪತ್ರೆಯಲ್ಲಿ ರೋಗಿಯ ರಕ್ತದೊಂದಿಗೆ ಸಂಪರ್ಕ ಬಂದಾಗ ವೈದ್ಯರು, ದಾದಿಯರು ಮತ್ತು ಆರೋಗ್ಯ ಸಿಬ್ಬಂದಿಗಳಿಗೆ ತಗಲುವ ಅವಕಾಶ ಹೆಚ್ಚಿರುತ್ತದೆ, ಅಸುರಕ್ಷಿತ ಲೈಂಗಿಕತೆ, ರಕ್ತಪೂರ್ಣ ಪ್ರಕ್ರಿಯೆ, ಒಬ್ಬರು ಬಳಸಿದ ಸೂಜಿ, ಸಿರೆಂಜ್‌ಗಳನ್ನು ಮತ್ತೊಬ್ಬರು ಬಳಸಿದಾಗ, ಜನನದಲ್ಲಿ ಸೋಕು ಪೀಡಿತ ತಾಯಿಯಿಂದ ಮಗುವಿಗೆ ಹರಡುತ್ತವೆ.



ಮನುಷ್ಯನಲ್ಲಿ ಈ ರೋಗ ಉಲ್ಬಣಗೊಂಡಾಗ ಆಯಾಸ, ಕೀಲು ನೋವು, ಜ್ವರ, ತಲೆಸುತ್ತುವಿಕೆ, ವಾಂತಿ, ಹಸಿವಾಗದಿರುವುದು, ಹೊಟ್ಟೆ ನೋವು, ಕಾಮಲೆ, ಗಾಡ ವರ್ಣದ ಮೂತ್ರ, ಚರ್ಮ ಹಳದಿ ಮತ್ತು ತುರಿಕೆ ಇನ್ನಿತರ ಸಮಸ್ಯೆಗಳನ್ನುಂಟು ಮಾಡುತ್ತದೆ.

ಈ ವೈರಸ್ ಬಾರದಂತೆ ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಬೇಕು, ಹಾಗೂ ಸೋಂಕಿಗೆ ತುತ್ತಾದವರು ಹೆಪಟೈಟಿಸ್ ಬಿ ಗೆ ಸರ್ಫೆಸ್, ಮತ್ತು ಆ?ಯಟಿಬಾಡಿ ಜನ್ ರಕ್ತ ಪರೀಕ್ಷೆಯನ್ನು ಮಾಡಿಸಿಕೊಳ್ಳಬೇಕು ಎಂದು ಮಾಹಿತಿ ನೀಡಿದರು.

ಜೆ.ಜೆ.ಎಂ.ಸಿ ಕಾಲೇಜಿನ ಸಹ ಪ್ರಾಧ್ಯಾಪಕಿ ಡಾ. ಅನುಷಾ, ವೈದ್ಯರು, ಆರೋಗ್ಯ ಸಿಬ್ಬಂದಿಗಳು, ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಸೆ. 9 ರಂದು ರಾಷ್ಟ್ರೀಯ ಲೋಕ ಅದಾಲತ್

**ಚಿತ್ರದುರ್ಗ :** ರಾಷ್ಟ್ರೀಯ ಕಾನೂನು ಸೇವೆಗಳ ಪ್ರಾಧಿಕಾರ ಮತ್ತು ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ನಿರ್ದೇಶನದಂತೆ 2023ರ ಸೆಪ್ಟೆಂಬರ್ 9ರಂದು ಶನಿವಾರ ರಾಷ್ಟ್ರೀಯ ಲೋಕ ಅದಾಲತ್ ಹಮ್ಮಿಕೊಳ್ಳಲಾಗಿದೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ನ್ಯಾಯಾಲಯದ ಆವರಣ, ಚಿತ್ರದುರ್ಗದ ಎಲ್ಲಾ ನ್ಯಾಯಾಲಯಗಳಲ್ಲಿ ಹಾಗೂ ತಾಲ್ಲೂಕು ನ್ಯಾಯಾಲಯಗಳಲ್ಲಿ ಬಾಕಿ ಇರುವ ಪ್ರಕರಣಗಳನ್ನು ರಾಜಿ ಮಾತುಕತೆ ಮೂಲಕ ತೀರ್ಮಾನಿಸಲು ಪ್ರತಿ ದಿನ ಜನತಾ ನ್ಯಾಯಾಲಯ ನಡೆಸಲಾಗುತ್ತದೆ.

ಮೋಟಾರು ವಾಹನ ಅಪಘಾತ ಪರಿಹಾರ ಅರ್ಜಿ, ರಾಜಿಯಾಗತಕ್ಕಂತಹ ಕ್ರಿಮಿನಲ್ ಪ್ರಕರಣ, ಸಿವಿಲ್ ದಾವೆ, ನೆಗೋಷಿಯಲ್ ಇನ್ಸ್ಟ್ರುಮೆಂಟ್ ಕಾಯ್ದೆಯಡಿ ದಾಖಲಾದ ಪ್ರಕರಣಗಳನ್ನು ರಾಜಿ ಸಂಧಾನದ ಮೂಲಕ ಇತ್ಯರ್ಥಪಡಿಸಲಾಗುತ್ತದೆ ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಎಂ.ವಿಜಯ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮುರುಘಾ ಮಠಕ್ಕೆ ತನ್ನದೇ ಆದ ಇತಿಹಾಸ ಪರಂಪರೆಯಿದೆ



**ಹೊಳಲ್ಕೆರೆ :** ಜಯದೇವ ಸ್ವಾಮಿಗಳ ಕಾಲದಿಂದಲೂ ಚಿತ್ರದುರ್ಗ ಮುರುಘಾಮಠಕ್ಕೆ ತನ್ನದೇ ಆದ ಇತಿಹಾಸ ಪರಂಪರೆಯಿದೆ. ಅದನ್ನು ಮುಂದುವರೆಸಿ ಕೊಂಡು ಹೋಗಬೇಕು ಎಂದು ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ತಿಳಿಸಿದರು.

ಹೊಳಲ್ಕೆರೆ ಸಮೀಪವಿರುವ ಒಂಟಿ ಕಂಬದ ಮಠದಲ್ಲಿ ನಡೆಯುವ ಜಗದ್ಗುರು ಮಲ್ಲಿಕಾರ್ಜುನ ಮುರುಘರಾಜೇಂದ್ರ ಮಹಾಸ್ವಾಮಿಗಳ ಸ್ಮರಣೋತ್ಸವ ನಿಮಿತ್ತ ಬಸವಪ್ರಭು ಸ್ವಾಮೀಜಿ ಅಧ್ಯಕ್ಷತೆಯಲ್ಲಿ ಬುಧವಾರ ನಡೆದ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಶಾಸಕ ಡಾ.ಎಂ.ಚಂದ್ರಪ್ಪ ಮುರುಘಾಮಠಕ್ಕೆ ಯಾರು ಸ್ವಾಮೀಜಿಗಲಾಗಿದ್ದರು ಎನ್ನುವುದು ಮುಖ್ಯವಲ್ಲ. ನಾಡಿನಾದ್ಯಂತ ಭಕ್ತರಿದ್ದು, ಯಾವುದೇ ಚ್ಯುತಿ ಬರದಂತೆ ನಡೆದುಕೊಂಡಿದ್ದಾರೆ. ಇತಿಹಾಸ ಪರಂಪರೆ ಉಳಿಯಬೇಕು ಎಂದು ಹೇಳಿದರು.

ಪುರಸಭೆ ಸದಸ್ಯ ಮುರುಗೇಶ್, ಬಸವರಾಜಯ್ಯ, ಡಿ.ಸಿ.ಮೋಹನ್, ಮನು, ಜಿತೇಂದ್ರ ಇನ್ನಿತರರು ಪೂರ್ವಭಾವಿ ಸಭೆಯಲ್ಲಿ ಹಾಜರಿದ್ದರು.



**ದಾವಣಗೆರೆ: ಇಲ್ಲಿಗೆ ಆಗಮಿಸಿರುವ ನೂತನ ಜಿಲ್ಲಾಧಿಕಾರಿ ಡಾ. ಎಂ.ವಿ. ವೆಂಕಟೇಶ್ ಅವರಿಗೆ ದಾವಣಗೆರೆ ಗೋ ಸಂರಕ್ಷಣಾ ಸಮಿತಿ ರಾಜ್ಯಾಧ್ಯಕ್ಷರಾದ ಬಿ.ಟಿ. ಸಿದ್ದಪ್ಪ ಹಾಗೂ ಬಿಜೆಪಿಯ ಯುವ ಮುಖಂಡ ಹಾಗೂ ಉದ್ಯಮಿ ಜಿ.ಎಸ್. ಶ್ಯಾಮ್ ನೇತೃತ್ವದಲ್ಲಿ ಆತ್ಮೀಯವಾಗಿ ಸ್ವಾಗತಿಸಿ, ಸನ್ಮಾನಿಸಿ ಗೌರವಿಸಲಾಯಿತು. ಈ ಸಂದರ್ಭದಲ್ಲಿ ಪವಾಡರಂಗವ್ವನಹಳ್ಳಿ ಶಿವಣ್ಣ, ಬಿಜೆಪಿ ಮುಖಂಡ ಗುಮ್ಮನೂರು ಶ್ರೀನಿವಾಸ್, ಸಂತೋಷ್ ಇದ್ದರು.**

# ಕಾಲುವೇಹಳ್ಳಿಯಲ್ಲಿ ಮೊಹರಂ ಆಚರಣೆ



**ಚಳ್ಳಕೆರೆ ತಾಲ್ಲೂಕಿನ ಕಾಲುವೇಹಳ್ಳಿ ಗ್ರಾಮದಲ್ಲಿ ಮಂಗಳವಾರ ಮೊಹರಂ ಹಬ್ಬವನ್ನು ಸಡಗರ, ಸಂಭ್ರಮದಿಂದ ಆಚರಿಸಿದರು.**

**ಚಳ್ಳಕೆರೆ :** ತಾಲ್ಲೂಕಿನ ಕಾಲುವೇಹಳ್ಳಿ ಗ್ರಾಮದಲ್ಲಿ ಪ್ರತಿವರ್ಷದಂತೆ ಈ ವರ್ಷವೂ ಅಲ್ಲಿನ ಹಿಂದೂ ಮುಸ್ಲಿಂ ಬಂಧುಗಳು ಮೊಹರಂ ಹಬ್ಬವನ್ನು ಸಂಭ್ರಮದಿಂದ ಆಚರಿಸಿದರು. ಗ್ರಾಮದ ವಿವಿಧ ಪಕ್ಷದ ಅನೇಕ ಮುಖಂಡರೂ ಸಹ ಮೆರವಣಿಗೆಯಲ್ಲಿ ಪಾಲ್ಗೊಂಡು ಮೊಹರಂ ಹಬ್ಬಕ್ಕೆ ಶುಭಹಾರೈಸಿದರು.

ಇದೇ ಸಂದರ್ಭದಲ್ಲಿ ಪೀರಲ ದೇವರ ದೇವಸ್ಥಾನದ ಮುಂಭಾಗದ ಅಲಾಭಿಗುಂಡಿಯಲ್ಲಿ ಬಾರಿ ಗಾತ್ರದ ಕೆಂಡವಿದ್ದರೂ ಭಕ್ತಿಯಿಂದ ಕೆಂಡವನ್ನು ದಾಟುವ ಮೂಲಕ ತಮ್ಮ ಹರಿಕೆಗಳನ್ನು ಪೂರೈಸಿಕೊಂಡರು. ಮೊಹರಂ ಹಬ್ಬದ ಹಿನ್ನೆಲೆ ಇಡೀ ಗ್ರಾಮದಲ್ಲಿ ಸಂತೋಷದ ವಾತಾವಣ ಉಂಟಾಗಿತ್ತು. ನೂರಾರು ಜನರು ಹಬ್ಬ ಆಚರಣೆಯ ನಂತರ ನೆರೆದಿದ್ದ ಎಲ್ಲಾ ಭಕ್ತರಿಗೆ ಪ್ರಸಾದ ವಿತರಿಸಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಸೊಪ್ಪಿನಪಾಲಯ್ಯ, ಮಾಜಿ ಜಿಲ್ಲಾ ಪಂಚಾಯಿತಿ ಸದಸ್ಯ ಜೆ.ಪಿ.ಜಯಪಾಲಯ್ಯ, ರಂಗಸ್ವಾಮಿ, ಪ್ರಹ್ಲಾದ, ಕೆ.ಓ.ಪಾಲಣ್ಣ, ರೈತ ಮುಖಂಡ ಕೆ.ಪಿ.ಭೂತಯ್ಯ, ಜಾಜೂರು ಹನುಮಂತಪ್ಪ, ಓ.ಗಾದ್ರಿಪಾಲಯ್ಯ, ಒ.ಟಿ.ಪಾಲಣ್ಣ, ಕೆ.ಜಿ.ತಿಮ್ಮಪ್ಪ, ಮೌಲಾಲಿ ಅಮೀದ್, ಸಣ್ಣಖಾಸೀಮ್ ಸಾಬ್, ಸತ್ತರ್‌ದಾಬ್, ರಾಘವೇಂದ್ರ ಮುಂತಾದವರು ಭಾಗವಹಿಸಿದ್ದರು.

# ಶ್ರಾವಣಮಾಸದ ದಿನಗಳಲ್ಲಿ ಆರ್ಜಿತ ಅಭಿಷೇಕಗಳ ಸ್ಥಗಿತ

**ಚಿತ್ರದುರ್ಗ :** ಆಂಧ್ರಪ್ರದೇಶದ ನಂದ್ಯಾಲ ಜಿಲ್ಲೆಯ ಶ್ರೀಶೈಲಂನ ಶ್ರೀಶೈಲ ಮಲ್ಲಿಕಾರ್ಜುನ ದೇವಸ್ಥಾನದಲ್ಲಿ ಆಗಸ್ಟ್ 17 ರಿಂದ ಸೆಪ್ಟೆಂಬರ್ 15ರ ವರೆಗಿನ ನಿಜಶ್ರಾವಣ ಮಾಸದ ಹಬ್ಬ ಮತ್ತು ರಜಾ ದಿನಗಳಲ್ಲಿ ಶ್ರೀ ಸ್ವಾಮಿಯ ಗರ್ಭಗುಡಿ ಆರ್ಜಿತ ಅಭಿಷೇಕ ಹಾಗೂ ಸಾಮೂಹಿಕ ಆರ್ಜಿತ ಅಭಿಷೇಕಗಳನ್ನು ಸ್ಥಗಿತಗೊಳಿಸಲಾಗಿದೆ ಎಂದು ಡೆಪ್ಯುಟಿ ಕಲೆಕ್ಟರ್ ಹಾಗೂ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಲವನ್ನ ಅವರು ತಿಳಿಸಿದ್ದಾರೆ.

ಶ್ರಾವಣ ಮಾಸೋತ್ಸವದಲ್ಲಿ ಭಕ್ತರ ಸಂಖ್ಯೆ ಹೆಚ್ಚಾಗುವ ಸಾಧ್ಯತೆ ಇದ್ದು, ವಿಶೇಷವಾಗಿ ಕರ್ನಾಟಕ ರಾಜ್ಯದ ವಿವಿಧ ಭಾಗಗಳಿಂದ ಹೆಚ್ಚಿನ ಸಂಖ್ಯೆಯ ಭಕ್ತರು ಶ್ರೀಶೈಲ ಕ್ಷೇತ್ರಕ್ಕೆ ದರ್ಶನಕ್ಕಾಗಿ ಬರುತ್ತಾರೆ. ಭಕ್ತರ ಅನುಕೂಲಕ್ಕಾಗಿ ನಿಜ ಶ್ರಾವಣ ಮಾಸದ ಶ್ರಾವಣಮಾಸೋತ್ಸವಗಳನ್ನು ಅಂದರೆ ಆಗಸ್ಟ್ 17 ರಿಂದ ಸೆಪ್ಟೆಂಬರ್ 15ರ ವರೆಗೆ ಸ್ಥಗಿತಗೊಳಿಸಲಾಗಿದೆ ಎಂದಿದ್ದಾರೆ.

ಶ್ರಾವಣ ಮಾಸದಲ್ಲಿ ಶನಿವಾರ, ಭಾನುವಾರ, ಸೋಮವಾರ, ಸ್ವಾತಂತ್ರ್ಯ ದಿನ (ಆ.15), ವರಲಕ್ಷ್ಮಿ ವ್ರತ (ಆ.25), ಶ್ರಾವಣಪೌರ್ಣಮಿ (ಆ.31), ಶ್ರೀ ಕೃಷ್ಣಾಷ್ಟಮಿ (ಸೆ.06) ಮುಂತಾದ ದಿನಗಳಲ್ಲಿ ಗರ್ಭಗುಡಿ ಆರ್ಜಿತ ಅಭಿಷೇಕಗಳು ಮತ್ತು ಸಾಮುದಾಯಿಕ ಅಭಿಷೇಕಗಳನ್ನು ಸಂಪೂರ್ಣವಾಗಿ ಸ್ಥಗಿತಗೊಳಿಸಲಾಗುತ್ತದೆ.

ಶ್ರಾವಣ ಮಾಸದ ಇನ್ನುಳಿದ ದಿನಗಳಲ್ಲಿ, ಸರ್ವದರ್ಶನದ ಜೊತೆಗೆ (ಉಚಿತ ಅಲಂಕಾರಿಕ ದರ್ಶನದ ಜೊತೆಗೆ), ಮಲ್ಲಿಕಾರ್ಜುನ ಸ್ವಾಮಿಯ ಸ್ಪರ್ಶ ದರ್ಶನವನ್ನು ಸಹ ನಾಲ್ಕು ಕಂತುಗಳಲ್ಲಿ ಒದಗಿಸಲಾಗುತ್ತದೆ. ಅಮ್ಮನವರ ಕುಂಕುಮಾರ್ಚನೆಗಳನ್ನು ಸಹ ಎಂದಿನಂತೆ ಯಥಾವಿಧಿಯಾಗಿ ನಡೆಸಲಾಗುತ್ತದೆ.

ಭಕ್ತರು ಸ್ಪರ್ಶ ದರ್ಶನಕ್ಕಾಗಿ ರೂ.500/– ಶುಲ್ಕವಾಗಿ ಪಾವತಿಸಬೇಕಾಗುತ್ತದೆ. ಮೇಲಿನ ನಿಗದಿತ ದಿನಗಳನ್ನು ಹೊರತುಪಡಿಸಿ ಶ್ರಾವಣ ಮಾಸದ ಇತರ ದಿನಗಳಲ್ಲಿ ಶ್ರೀ ಸ್ವಾಮಿಯವರಿಗೆ ಅಭಿಷೇಕಗಳು ಎಂದಿನಂತೆ ನಡೆಯಲಿವೆ ಎಂದು ತಿಳಿಸಿದ್ದಾರೆ.

ಈ ನಿರ್ದಿಷ್ಟ ದಿನಗಳನ್ನು ಹೊರತುಪಡಿಸಿ, ಸಾಮಾನ್ಯ ದಿನಗಳಲ್ಲಿ ಅಂದರೆ ಮಂಗಳವಾರ, ಬುಧವಾರ, ಗುರುವಾರ ಮತ್ತು ಶುಕ್ರವಾರ ಮಧ್ಯಾಹ್ನ 2 ರಿಂದ ನೀಡಲಾಗುವ ಉಚಿತ ಸ್ಪರ್ಶ ದರ್ಶನ ಎಂದಿನಂತೆ ಮುಂದುವರಿಯಲಿದೆ.

ಆದರೆ ಇಂದಿನ ದಿನಗಳಲ್ಲಿ ಉಚಿತ ಸ್ಪರ್ಶ ದರ್ಶನಕ್ಕೆ ಬರುವ ಭಕ್ತರು ಮಧ್ಯಾಹ್ನ 1.30 ರೊಳಗೆ ಸರತಿ(ಕ್ಯೂ) ಕಾಂಪ್ಲೆಕ್ಸ್‌ನಲ್ಲಿ ವರದಿ ಮಾಡಬೇಕು.

ಭಕ್ತರು ಆರ್ಜಿತ ಅಭಿಷೇಕಗಳು, ಕುಂಕು ಮಾರ್ಚನೆಗಳು, ಹೋಮಗಳು, ಶ್ರೀಸ್ವಾಮಿ ಅಮ್ಮನವರ ಕಲ್ಯಾಣೋತ್ಸವ ಇತ್ಯಾದಿ ಆರ್ಜಿತಸೇವಾ ಟಿಕೆಟ್‌ಗಳನ್ನು ಹಾಗೂ ಶ್ರೀಸ್ವಾಮಿಯ ಸ್ಪರ್ಶದರ್ಶನದ ಟಿಕೆಟ್‌ಗಳನ್ನು ದೇವಸ್ಥಾನದ ಅಧಿಕೃತ ವೆಬ್‌ಸೈಟ್‌ನಿಂದ ಮಾತ್ರ ಪಡೆಯಬೇಕು. ಪ್ರಸ್ತುತ ಬುಕಿಂಗ್ ಮೂಲಕ ಈ ಟಿಕೆಟ್‌ಗಳು ಲಭ್ಯವಿರುವುದಿಲ್ಲ ಎಂದು ತಿಳಿಸಿದ್ದಾರೆ.

ಭಕ್ತರು ಆಯಾ ಟಿಕೆಟ್‌ಗಳನ್ನು ದೇವಸ್ಥಾನದ ವೆಬ್‌ಸೈಟ್ **www.srisailadevasthanam.org** ಮೂಲಕ ಮುಂಗಡವಾಗಿ ಪಡೆಯಬಹುದು. ಆಗಸ್ಟ್ ತಿಂಗಳ ಟಿಕೆಟ್ ಕೋಟಾವನ್ನು ಈಗಾಗಲೇ ದೇವಸ್ಥಾನದ ವೆಬ್‌ಸೈಟ್‌ನಲ್ಲಿ ಲಭ್ಯವಾಗುವಂತೆ ಮಾಡಲಾಗಿದೆ. ಅದರಂತೆಯೇ, ಸೆಪ್ಟೆಂಬರ್ ತಿಂಗಳ ಟಿಕೆಟ್‌ಗಳ ಕೋಟಾ ಆಗಸ್ಟ್ 25 ರಿಂದ ಲಭ್ಯವಿರುತ್ತದೆ.

ಶ್ರೀಶೈಲ ಮಲ್ಲಿಕಾರ್ಜುನ ಸ್ವಾಮಿಯ ಸ್ಪರ್ಶದರ್ಶನ ಚೀಟಿದಾರರು ಟಿಕೆಟ್ ಪ್ರತಿ (ಹಾರ್ಡ್ ಕಾಪಿ) ಮತ್ತು ಆಧಾರ್ ಕಾರ್ಡ್ ಮೂಲ ಅಥವಾ ಜೆರಾಕ್ಸ್ ಪ್ರತಿಯನ್ನು ತರಬೇಕು. ಆಯಾ ಸೇವಾ ಟಿಕೆಟಗಳನ್ನು ಸ್ಕ್ಯಾನ್ ಮಾಡಿದ ನಂತರ ಮತ್ತು ಆಧಾರ್ ಗುರುತಿನ ಚೀಟಿಯೊಂದಿಗೆ ಆಯಾ ಟಿಕೆಟ್‌ಗಳನ್ನು ಪರಿಶೀಲಿಸಿದ ನಂತರ, ಭಕ್ತರಿಗೆ ಆಯಾ ಸೇವೆಗಳಿಗೆ ಅವಕಾಶ ನೀಡಲಾಗುತ್ತದೆ.

ಆದರೆ ರೂ.150/– ತ್ವರಿತ ದರ್ಶನಕ್ಕೆ (ಶ್ರೀ ಸ್ವಾಮಿಯ ಅಲಂಕಾರಿಕ ದರ್ಶನ ಮಾತ್ರ) ಮತ್ತು ರೂ.300/– ಅತಿತ್ವರಿತ ದರ್ಶನ ಟಿಕೆಟ್‌ಗಳನ್ನು (ಶ್ರೀಸ್ವಾಮಿಯ ಅಲಂಕಾರಿಕ ದರ್ಶನ ಮಾತ್ರ) ಆನ್‌ಲೈನ್ ಮತ್ತು ಕರೆಂಟ್ ಬುಕಿಂಗ್ ಮೂಲಕ ಪಡೆಯಬಹುದು. ಈ ಪೈಕಿ ಶೇ.30ರಷ್ಟು ಟಿಕೆಟ್‌ಗಳನ್ನು ಆನ್‌ಲೈನ್‌ನಲ್ಲಿ ನೀಡಲಾಗಿದ್ದು, ಶೇ.70ರಷ್ಟು ಟಿಕೆಟ್‌ಗಳನ್ನು ಕರೆಂಟ್ ಬುಕ್ಕಿಂಗ್ ಮೂಲಕ ನೀಡಲಾಗುತ್ತದೆ.

ಆರ್ಜಿತ ಸೇವೆಗಳನ್ನು ಮಾಡುವ ಭಕ್ತರು ತಮ್ಮ ಶ್ರೀಶೈಲಯಾತ್ರೆಯನ್ನು ಆರ್ಜಿತ ಸೇವೆಗಳು ಮತ್ತು ಸ್ಪರ್ಶ ದರ್ಶನದ ಟಿಕೆಟ್‌ಗಳ ಲಭ್ಯತೆ–ಗೆ ಅನುಗುಣವಾಗಿ ಯೋಜಿಸಿಕೊಳ್ಳಬೇಕು ಎಂದು ಡೆಪ್ಯುಟಿ ಕಲೆಕ್ಟರ್ ಹಾಗೂ ಕಾರ್ಯನಿರ್ವಾಹಕ ಅಧಿಕಾರಿ ಎಸ್.ಲವನ್ನ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗ್ರಾಮೀಣ ಮಟ್ಟದಲ್ಲಿ ಡಿಜಿಟಲೀಕರಣದಿಂದ ಹೆಚ್ಚು ಜನತೆಗೆ ಅನುಕೂಲ : ಶ್ರೀಧರ.

**ಚಳ್ಳಕೆರೆ :** ಗ್ರಾಮೀಣ ಭಾಗಗಳಲ್ಲಿ ಜನರಿಗೆ ತಾಂತ್ರಿಕತೆಯ ಬಗ್ಗೆ ಜಾಗೃತಿ ಮೂಡಿಸಲು ಕೇಂದ್ರ ಸರ್ಕಾರದ ಮಾರ್ಗದರ್ಶನದಲ್ಲಿ ರಾಜ್ಯ ಸರ್ಕಾರ ಗ್ರಾಮ ಪಂಚಾಯಿತಿಗಳ ಡಿಜಿಟಲ್ ಕಾರ್ಯಕ್ರಮವನ್ನು ರೂಪಿಸಿ ಗ್ರಾಮೀಣ ಜನರಿಗೂ ಸರ್ಕಾರದ ವಿವಿಧ ಯೋಜನೆಗಳ ಬಗ್ಗೆ ಮಾರ್ಗದರ್ಶನ ನೀಡುತ್ತಿರುವುದು ಸಂತಸ ವಿಷಯವೆಂದು ಶಿಕ್ಷಣ ಫೌಂಡೇಷನ್ ಜಿಲ್ಲಾ ಸಂಯೋಜಕ ಎಸ್.ಬಿ.ಶ್ರೀಧರ್ ತಿಳಿಸಿದರು.

ಇಲ್ಲಿನ ಗ್ರಂಥಾಲಯದಲ್ಲೂ ಸಹ ಡಿಜಿಟಲ್ ತಾಂತ್ರಿಕತೆ ಅಳವಡಿಸಿ ಜನರಿಗೆ ಸುಲಭವಾಗಿ ಸರ್ಕಾರ ವಿವಿಧ ಯೋಜನೆಗಳ ಬಗ್ಗೆ ಅರಿವು ಮೂಡಿಸಲು ಸಹಾಯಕವಾಗುತ್ತದೆ.

ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ಎಂ.ರಾಮಚಂದ್ರಪ್ಪ ಮಾತನಾಡಿ, ಪ್ರಸ್ತುತ ಗ್ರಾಮದ ಈ ಗ್ರಂಥಾಲಯ ತಾಲ್ಲೂಕು ಮಟ್ಟದಲ್ಲಿ ಆಕರ್ಷಣೆ ಕೇಂದ್ರವಾಗಿದೆ. ಇತ್ತೀಚಿಗಷ್ಟೇ ತಾಲ್ಲೂಕು ಮಟ್ಟದ ವಿವಿಧ ಗ್ರಂಥಾಲಯಗಳ ಗ್ರಂಥಪಾಲಕರು ಇಲ್ಲಿಗೆ ಭೇಟಿ ನೀಡಿ ಗ್ರಂಥಾಲಯ ನಿರ್ವಹಣೆಯ ಬಗ್ಗೆ ಮಾಹಿತಿ ಪಡೆದಿದ್ದಾರೆ. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಡಿಜಿಟಲೀಕರಣ ಹೊಸ ಪ್ರಯೋಗವಾಗಲು ಇಂದಿನ ಸ್ಥಿತಿಗೆ ಅತ್ಯುತ್ತಮ ಎಂದರು.

ಕಾರ್ಯಕ್ರಮದಲ್ಲಿ ಪಂಚಾಯಿತಿ ಕಾರ್ಯದರ್ಶಿ ಎಂ.ಮಂಜುಳಾ, ತಾಲ್ಲೂಕು ಸಂಯೋಜಕಿ ಸಬ್ರಿನ್ ತಾಜ್, ಪಿ.ಶ್ರೀನಿವಾಸ್, ಮುಖ್ಯ ಶಿಕ್ಷಕಿ ಬಿ.ಟಿ.ವರಮಹಾಲಕ್ಷ್ಮಿ, ಗ್ರಂಥಪಾಲಕ ಪಿ.ನಿರಂಜನಮೂರ್ತಿ, ಗ್ರಾಮ ಪಂಚಾಯಿತಿ ಚುನಾಯಿತ ಸದಸ್ಯರು, ಶಿಕ್ಷಕರು, ಶಾಲಾ ಮಕ್ಕಳು ಪಾಲ್ಗೊಂಡಿದ್ದರು.




**ಚಳ್ಳಕೆರೆ ತಾಲ್ಲೂಕಿನ ನಗರಂಗೆರೆ ಗ್ರಾಪಂ ಸಂಪೂರ್ಣ ಡಿಜಿಟಲ್ ಸಾಕ್ಷರತೆ ಕಾರ್ಯಕ್ರಮದ ಬಗ್ಗೆ ಜಾಗೃತಿ ಜಾಥ ನಡೆಸಿದರು.**

# ಚಿನ್ನಾಭರಣ ಕಳ್ಳವು

**ನಮ್ಮ ಜನ ವಾರ್ತೆ ದಾವಣಗೆರೆ :** ದಾವಣಗೆರೆಯಿಂದ ಚಿತ್ರದುರ್ಗಕ್ಕೆ ವಾಯುವ್ಯ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಬಸ್ ನಲ್ಲಿ ಪ್ರಯಾಣಿಸುತ್ತಿದ್ದ ಪ್ರಯಾಣಿಕರೊಬ್ಬರಿಗೆ 3,99,000 ರೂ. ಬೆಲೆ ಬಾಳುವ 107 ಗ್ರಾಂ ಚಿನ್ನಾಭರಣ ಕಳ್ಳತನವಾಗಿರುವ ಘಟನೆ ನಡೆದಿದೆ.



ಬಳ್ಳಾರಿಯ ರಾಘವೇಂದ್ರ ಶೆಟ್ಟಿ ತನ್ನ ಮಗ ನಂದನ್, ಹೆಂಡತಿ ಲಕ್ಷ್ಮೀ ಅವರೊಂದಿಗೆ ಜೂ.29 ರಂದು ಬಳ್ಳಾರಿಗೆ ತೆರಳಲು ಬಸ್ ನಿಲ್ದಾಣದಿಂದ ವಾಯುವ್ಯ ಸಾರಿಗೆ ಬಸ್‌ನಲ್ಲಿ ಪ್ರಯಾಣಿಸುತ್ತಿದ್ದರು.

ಬಸ್ ಭರಮಸಾಗರ ತಲುಪುವ ವೇಳೆಗೆ ರಾಘವೇಂದ್ರ ಶೆಟ್ಟಿಗೆ ಅನುಮಾನ ಬ್ಯಾಗ್ ನಲ್ಲಿದ್ದ ಆಭರಣಗಳ ಪೆಟ್ಟಿಗೆಯನ್ನು ಪರಿಶೀಲಿಸಿದಾಗ ಕಾಣೆ–ಯಾಗಿದೆ. ಆಭರಣಗಳ ಪೆಟ್ಟಿಗೆಯನ್ನು ಯಾರೋ ಕಳ್ಳರು ಅಪಹರಿಸಿದ್ದು, ಕಳ್ಳರನ್ನು ಪತ್ತೆ ಮಾಡಿ, ಒಡವೆಗಳನ್ನು ಹುಡುಕಿ ಕೊಡುವಂತೆ ರಾಘವೇಂದ್ರ ಶೆಟ್ಟಿ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದಾರೆ.

# ಅಸಮಾಧಾನ ಅತೃಪ್ತಿ ಬದಿಗಿಟ್ಟು ಲೋಕಸಭೆ ಗೆಲುವಿಗೆ ಶ್ರಮಿಸಿ

**ನಮ್ಮ ಜನ ವಾರ್ತೆ ಬೆಂಗಳೂರು :** ಮುಂಬರುವ ಲೋಕಸಭಾ ಚುನಾವಣೆ ನಮ್ಮೆಲ್ಲರಿಗೂ ಮಹತ್ವದ್ದು, ಈ ಚುನಾವಣೆಯಲ್ಲಿ ಹೆಚ್ಚಿನ ಸ್ಥಾನ ಗೆಲ್ಲಲೇಬೇಕು. ಹಾಗಾಗಿ, ಅಸಮಾಧಾನ, ಅತೃಪ್ತಿಗಳನ್ನೆಲ್ಲ ಬದಿಗಿಟ್ಟು, ಚುನಾವಣೆಯಲ್ಲಿ ಪಕ್ಷದ ಗೆಲುವಿಗೆ ಈಗಿನಿಂದಲೇ ಚಿತ್ತ ಹರಿಸಿ ಎಂದು ಕಾಂಗ್ರೆಸ್ ಹೈಕಮಾಂಡ್ ರಾಜ್ಯ ನಾಯಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದೆ.

ದೆಹಲಿಯಲ್ಲಿಂದು ಮುಂದಿನ ಲೋಕಸಭಾ ಚುನಾವಣೆಯ ಸಿದ್ಧತೆ, ಪಕ್ಷ ಮತ್ತು ಸರ್ಕಾರದ ನಡುವೆ ಸಮನ್ವಯತೆಗೆ ಸಮಿತಿ ರಚನೆ, ಶಾಸಕರ ಅಹವಾಲುಗಳಿಗೆ ಸ್ಪಂದನೆ, ಪಕ್ಷದಲ್ಲಿನ ಆಂತರಿಕ ಬೇಗುದಿಗೆ ಪರಿಹಾರ ಸೇರಿದಂತೆ ಹಲವು ಮಹತ್ವದ ವಿಚಾರಗಳ ಬಗ್ಗೆ ಕಾಂಗ್ರೆಸ್ ಹೈಕಮಾಂಡ್ ಮುಖ್ಯಮಂತ್ರಿ ಸಿದ್ದರಾಮಯ್ಯ ಸೇರಿದಂತೆ ಎಲ್ಲ ಸಚಿವರು ಹಾಗೂ ಆಯ್ದ ಪ್ರಮುಖ ನಾಯಕರುಗಳ ಜತೆ ಹೈ ವೋಲ್ಟೇಜ್ ಸಭೆ ನಡೆಸಿದ್ದು, ಈ ಸಭೆಯಲ್ಲಿ ಅಸಮಾಧಾನ, ಮುನಿಸುಗಳನ್ನು ಬದಿಗಿಟ್ಟು ಲೋಕಸಭಾ ಚುನಾವಣೆಯ ಗೆಲುವಿಗೆ ಶ್ರಮಿಸುವಂತೆ ವರಿಷ್ಠರು ರಾಜ್ಯ ನಾಯಕರಿಗೆ ತಾಕೀತು ಮಾಡಿದ್ದಾರೆ. ಲೋಕಸಭಾ ಚುನಾವಣೆಗಳು ಹತ್ತಿರವಾಗುತ್ತಿವೆ. ಸರ್ಕಾರ ಬಂದು 2 ತಿಂಗಳಷ್ಟೇ ಆಗಿದೆ ಹೀಗಿರುವಾಗ ಅಸಮಾಧಾನಗಳು ಸ್ಫೋಟಗೊಳ್ಳದಂತೆ ಎಚ್ಚರ ವಹಿಸಿ ಲೋಕಸಭಾ ಚುನಾವಣೆಯ ಗೆಲುವಿನತ್ತ ಎಲ್ಲರೂ ಚಿತ್ತ ಹರಿಸಬೇಕು. ಪಕ್ಷದ ಹಿತ ಮುಖ್ಯ. ಪಕ್ಷಕ್ಕಾಗಿ ಎಲ್ಲ ತ್ಯಾಗಕ್ಕೂ ಸಿದ್ಧರಾಗಿ ಎಂಬ ಸಂದೇಶವನ್ನು ಈ ಸಭೆಯಲ್ಲಿ ವರಿಷ್ಠರು ನೀಡಿದ್ದಾರೆ.

ಕರ್ನಾಟಕ ವಿಧಾನಸಭಾ ಚುನಾವಣೆಯ ಗೆಲುವು ಕಾಂಗ್ರೆಸ್ ಪಕ್ಷದಲ್ಲಿ ನವ ಚೈತನ್ಯ ಹಾಗೂ ಶಕ್ತಿ ತುಂಬಿದೆ. ಇದನ್ನು ಮುಂದುವರೆಸಿಕೊಂಡು ಲೋಕಸಭಾ

ಚುನಾವಣೆಯಲ್ಲೂ ಹೆಚ್ಚಿನ ಸ್ಥಾನ ಗೆಲ್ಲಬೇಕಿದೆ. ಹಾಗಾಗಿ, ಗ್ಯಾರಂಟಿ ಯೋಜನೆಗಳ ಲಾಭ ಜನರಿಗೆ ತಲುಪಿಸಿ ಆ ಮೂಲಕ ಲೋಕಸಭಾ ಚುನಾವಣೆಯಲ್ಲೂ ಕಾಂಗ್ರೆಸ್ ಪಕ್ಷಕ್ಕೆ ಹೆಚ್ಚಿನ ಸ್ಥಾನ ಸಿಗುವಂತೆ ನೋಡಿಕೊಳ್ಳಿ. ಪ್ರತಿಷ್ಠೆ, ಅಹಂಗಳನ್ನು ಬಿಟ್ಟು ಪರಸ್ಪರ ಸಮನ್ವಯತೆಯಿಂದ ಕೆಲಸ ಮಾಡಿ ಎಂದು ವರಿಷ್ಠರು ಈ ಸಭೆಯಲ್ಲಿಹೇಳಿದರು ಎಂದು ಕಾಂಗ್ರೆಸ್ ಮೂಲಗಳು ತಿಳಿಸಿವೆ. ರಾಜ್ಯದಲ್ಲಿ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬಂದು 2 ತಿಂಗಳಾಗಿರುವಾಗಲೇ ಪಕ್ಷದಲ್ಲಿ ಮೂಡಿರುವ ಆಂತರಿಕ ಬೇಗುದಿ, ಶಾಸಕರ ಅಸಮಾಧಾನ ಎಲ್ಲದಕ್ಕೂ ಪರಿಹಾರ ಕಂಡುಕೊಂಡು ಮುಂದಿನ ಲೋಕಸಭಾ ಚುನಾವಣೆಗೆ ಈಗಿನಿಂದಲೇ ಸಿದ್ಧತೆಗಳನ್ನು ಮಾಡಿಕೊಂಡು ಕೆಲ ಸಚಿವರುಗಳಿಗೆ ಚುನಾವಣೆಯ ನಿರ್ದಿಷ್ಟ ಜವಾಬ್ದಾರಿಗಳನ್ನು ವಹಿಸುವ ಸಂಬಂಧವೂ ಈ ಸಭೆಯಲ್ಲಿ ಚರ್ಚೆಗಳು ನಡೆದಿವೆ.ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮಾಜಿ ಅಧ್ಯಕ್ಷ ರಾಹುಲ್‌ಗಾಂಧಿ ನೇತೃತ್ವದಲ್ಲಿ 2 ಹಂತಗಳಲ್ಲಿ ದೆಹಲಿಯಲ್ಲಿ ಸಭೆ ನಡೆದಿದ್ದು, ಮಧ್ಯಾಹ್ನ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಪ್ರಮುಖ ಮುಖಂಡರ ಸಭೆ ನಡೆಯಿತು.



ಸಂಜೆ ರಾಜ್ಯದ ಎಲ್ಲ ಸಚಿವರುಗಳ ಜತೆ-ಯೂ ವರಿಷ್ಠರು ಚರ್ಚೆ ನಡೆಸಿ ಆಡಳಿತಕ್ಕೆ ಸಂಬಂಧಿಸಿದಂತೆ ನೀತಿ ಪಾಠವನ್ನು ಹೇಳುವ ಜತೆಗೆ ಶಾಸಕರ ಮಾತುಗಳಿಗೆ ಸ್ಪಂದಿಸಿ ಎನ್ನುವ ಕಿವಿಮಾತನ್ನು ಹೇಳಲಿದ್ದಾರೆ ಹಾಗೆಯೇ, ಶಾಸಕರಿಗೂ ಸಹ ಬಹಿರಂಗವಾಗಿ ಅಸಮಾಧಾನ ಹೊರಹಾಕಿ ಪಕ್ಷದ ವರ್ಚಸ್ಸಿಗೆ ಧಕ್ಕೆ ತರಬೇಡಿ ಏನೇ ಇದ್ದರೂ ಪಕ್ಷದ ವೇದಿಕೆಯಲ್ಲಿ ಚರ್ಚಿಸಿ ಎಂಬ ಬುದ್ಧಿಮಾತನ್ನು ಹೇಳಲು ವರಿಷ್ಠರು ನಿರ್ಧರಿಸಿದ್ದಾರೆ.

ಲೋಕಸಭಾ ಚುನಾವಣೆಯ ಸಿದ್ಧತೆ-ಯ ಅಜೆಂಡ ಇಂದು ಮಧ್ಯಾಹ್ನ ನಡೆದ ಪ್ರಮುಖರ ಸಭೆಯಲ್ಲಿ ಲೋಕಸಭಾ ಚುನಾವಣೆಯ ಸಿದ್ಧತೆಗಳ ಬಗ್ಗೆಯೇ ಹೆಚ್ಚಿನ ಚರ್ಚೆಗಳು ನಡೆದಿದ್ದು, ಮುಂಬರುವ ಲೋಕಸಭಾ ಚುನಾವಣೆಯಲ್ಲಿ ಶತಾಯ-ಗತಾಯ ಹೆಚ್ಚಿನ ಸ್ಥಾನ ಗೆಲ್ಲಲೇಬೇಕು. ಹಾಗಾಗಿ ಈಗಿನಿಂದಲೇ ಚುನಾವಣೆಗೆ ತಯಾರಿಗಳನ್ನು ನಡೆಸುವ ಬಗ್ಗೆಯೂ ಚರ್ಚೆಗಳು ನಡೆದಿವೆ.

ಸಚಿವರನ್ನು ಕಣಕ್ಕಿಳಿಸುವ ಬಗ್ಗೆ ಚರ್ಚೆ ಮುಂದಿನ ಲೋಕಸಭಾ ಚುನಾವಣೆಯಲ್ಲಿ ಹಾಲಿ ಸಚಿವರನ್ನು ಲೋಕಸಭಾ ಚುನಾವಣೆಗೆ ಕಣಕ್ಕಿಳಿಸುವಬಗ್ಗೆ ಚರ್ಚೆಗಳನ್ನು ನಡೆಸಲಾಗಿದೆ. ಗೆಲ್ಲುವ ಮಾನದಂಡದ ಮೇಲೆ ಹಾಲಿ ಸಚಿವರು, ಶಾಸಕರುಗಳನ್ನು ಚುನಾವಣಾ ಕಣಕ್ಕಿಳಿಸುವ ಅಗತ್ಯವಿದೆ. ಅಂತಹ ಸಚಿವರನ್ನು ಈಗಿನಿಂದಲೇ ಲೋಕಸಭಾ ಚುನಾವಣೆಗೆ ತಯಾರಾಗುವಂತೆ ಸಂಜೆ ನಡೆಯುವ ಸಚಿವರ ಸಭೆಯಲ್ಲಿ ಸೂಚನೆ ನೀಡಿ ಪಕ್ಷದ ಹಿತಕ್ಕಾಗಿ ಎಲ್ಲ ತ್ಯಾಗಕ್ಕೂ ಸಿದ್ಧರಾಗಿ ಎಂಬ ಕಿವಿಮಾತನ್ನು ಹೇಳಲು ಪ್ರಮುಖರ ಸಭೆಯಲ್ಲಿ ತೀರ್ಮಾನ ಕೈಗೊಳ್ಳಲಾಗಿದೆ.

ಲೋಕಸಭಾ ಚುನಾವಣೆಗೆ ಈಗಿನಿಂದಲೇ ಯಾರನ್ನು ಅಭ್ಯರ್ಥಿ ಮಾಡಿದರೆ ಗೆಲುವು ಸಾಧ್ಯ ಎಂಬ ಬಗ್ಗೆ ಸಮೀಕ್ಷೆಗಳನ್ನು ನಡೆಸಲು ಸಭೆಯಲ್ಲಿ ತೀರ್ಮಾನಿಸಲಾಗಿದ್ದು, ಲೋಕಸಭಾ ಚುನಾವಣೆಯ ನೀಲನಕ್ಷೆಯನ್ನು ತಯಾರು ಮಾಡುವ ಬಗ್ಗೆಯೂ ಚರ್ಚೆಗಳು ನಡೆದಿವೆ.

ಪ್ರಮುಖರ ಸಭೆಯಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ರಾಹುಲ್‌ಗಾಂಧಿ, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್,ರಾಜ್ಯಕಾಂಗ್ರೆಸ್ ಉಸ್ತುವಾರಿ ರಣದೀಪ್‌ಸಿಂಗ್ ಸುರ್ಜೇವಾಲಾ, ಎಐಸಿಸಿ ಪ್ರಧಾನ ಕಾರ್ಯದರ್ಶಿ ವೇಣುಗೋಪಾಲ್, ಎಐಸಿಸಿ ಸದಸ್ಯರು, ಎಐಸಿಸಿ ಕಾರ್ಯದರ್ಶಿಗಳ ಕೆಲ ಪ್ರಮುಖ ಸದಸ್ಯರೂ ಸೇರಿದಂತೆ ಸುಮಾರು 40ಕ್ಕೂ ಹೆಚ್ಚು ನಾಯಕರು ಪಾಲ್ಗೊಂಡಿದ್ದರು.

ಸಂಜೆ ಸಚಿವರ ಜತೆ ಸಭೆ ಪ್ರಮುಖ ನಾಯಕರ ಸಭೆಯ ಬಳಿಕ ಕಾಂಗ್ರೆಸ್ ವರಿಷ್ಠರು ರಾಜ್ಯದ ಎಲ್ಲ ಸಚಿವರ ಜತೆ ಸಭೆ ನಡೆಸಲಿದ್ದು, ಈ ಸಭೆಯಲ್ಲಿ ಶಾಸಕರು ಮತ್ತು ಸಚಿವರ ನಡುವಿನ ಸಂಪರ್ಕ ಕೊರತೆಯನ್ನು ನೀಗಿಸಿ ಸರ್ಕಾರ ಮತ್ತು ಪಕ್ಷದ ನಡುವೆ ಸಮನ್ವಯತೆ ಕಾಯ್ದುಕೊಳ್ಳುವ ಬಗ್ಗೆ ಚರ್ಚೆಗಳು ನಡೆಯಲಿದ್ದು, ಶಾಸಕರ ಅಹವಾಲುಗಳಿಗೆ ಸ್ಪಂದಿಸುವಂತೆ ಎಲ್ಲ ಸಚಿವರಿಗೂ ವರಿಷ್ಠರು ಬುದ್ಧಿಮಾತು ಹೇಳುವರು.

**ದೆಹಲಿಯಲ್ಲಿ ಕಾಂಗ್ರೆಸ್ ನಾಯಕರ ದಂಡು :** ದೆಹಲಿಯಲ್ಲಿಂದು ನಡೆದಿರುವ ಕಾಂಗ್ರೆಸ್ ವರಿಷ್ಠರ ಹೈ ವೋಲ್ಟೇಜ್ ಸಭೆಯಲ್ಲಿ ಪಾಲ್ಗೊಳ್ಳಲು ಸರ್ಕಾರದ ಎಲ್ಲ ಸಚಿವರು ದೆಹಲಿಗೆ ತೆರಳಿದ್ದು, ಇವರ ಜತೆಗೆ ಪ್ರಮುಖ ನಾಯಕರು ಹಾಗೂ ಹಲವು ಶಾಸಕರೂ ಸಹ ದೆಹಲಿಯತ್ತ ಮುಖ ಮಾಡಿದ್ದು, ಇಡೀ ಸರ್ಕಾರ ಒಂದು ದಿನದ ಮಟ್ಟಿಗೆ ದೆಹಲಿಯಲ್ಲೇ ಮೊಕ್ಕಾಂ ಹೂಡಿದಂತಾಗಿದೆ.

ವರಿಷ್ಠರ ಇಂದಿನ ಸಭೆಯಲ್ಲಿ ಪಾಲ್ಗೊಳ್ಳಲು ಮುಖ್ಯಮಂತ್ರಿ ಸಿದ್ದರಾಮಯ್ಯರವರು ಕೆಲ ಸಚಿವರ ಜತೆ ಇಂದು ಬೆಳಿಗ್ಗೆ ಬೆಂಗಳೂರಿನಿಂದ ದೆಹಲಿಗೆ ತೆರಳಿದರು. ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಹಲವು ಸಚಿವರು ಹಗೂ ಪ್ರಮುಖ ನಾಯಕರು ನಿನ್ನೆಯೇ ದೆಹಲಿಗೆ ತೆರಳಿದ್ದಾರೆ. ಇಂದು ದೆಹಲಿಯಲ್ಲಿ ರಾಜ್ಯಕಾಂಗ್ರೆಸ್ ನಾಯಕರುಗಳ ದಂಡೇ ಬೀಡು ಬಿಟ್ಟಿದ್ದು, ವರಿಷ್ಠರ ಸಭೆಯ ನಂತರ ಎಲ್ಲರೂ ನಾಳೆ ಬೆಂಗಳೂರಿಗೆ ವಾಪಸ್ಸಾಗುವರು.

ಕಳೆದ ವಿಧಾನಸಭಾ ಚುನಾವಣೆ ಸಂದರ್ಭದಲ್ಲಿ ಬಿಜೆಪಿ ಬಿಟ್ಟು ಕಾಂಗ್ರೆಸ್ ಸೇರಿದ್ದ ಮಾಜಿ ಮುಖ್ಯಮಂತ್ರಿ ಜಗದೀಶ್ ಶೆಟ್ಟರ್ ಹಾಗೂ ಮಾಜಿ ಉಪಮುಖ್ಯಮಂತ್ರಿ ಲಕ್ಷ್ಮಣ್‌ಸವದಿ ಅವರಿಗೂ ದೆಹಲಿ ಸಭೆಯಲ್ಲಿ ಪಾಲ್ಗೊಳ್ಳುವಂತೆ ಆಹ್ವಾನ ಬಂದಿದ್ದು, ಅವರೂ ಸಹ ದೆಹಲಿಗೆ ತೆರಳಿದ್ದಾರೆ. ಒಟ್ಟಾರೆ ಸಚಿವರೂ ಸೇರಿದಂತೆ 50 ಮಂದಿಗೆ ವರಿಷ್ಠರಿಂದ ಆಹ್ವಾನ ಬಂದಿದೆ.ವರಿಷ್ಠರ ಸಭೆಗೆ ಪಾಲ್ಗೊಳ್ಳಲು ಆಹ್ವಾನಿತರಿಗಷ್ಟೇ ಅವಕಾಶವಿದ್ದರೂ ಹಲವು ಶಾಸಕರು ದೆಹಲಿಗೆ ತೆರಳಿದ್ದು, ಹೈಕಮಾಂಡ್ ಜತೆ ಚರ್ಚೆ ನಡೆಸಿ ತಮ್ಮ ಅಹವಾಲನ್ನು ಹೇಳಿಕೊಳ್ಳಲು ಮುಂದಾಗಿದ್ದಾರೆ. ಆದರೆ,ಇವರಿಗೆ ವರಿಷ್ಠರು ಸಮಯಾವಕಾಶ ನೀಡುವರೇ ಎಂಬುದು ಸದ್ಯಕ್ಕೆ ಕುತೂಹಲ ಮೂಡಿಸಿದೆ.

## ಫಾಸ್ಟ್ ನ್ಯೂಸ್

### ಪೂರ್ವಭಾವಿ ಸಭೆ



**ಹೊಳಲ್ಕೆರೆ :** ದೇಶದ ಸ್ವಾತಂತ್ರ್ಯಕ್ಕಾಗಿ ಬ್ರಿಟೀಷರ ವಿರುದ್ದ ಹೋರಾಡಿ ತ್ಯಾಗ ಬಲಿದಾನ ಗೈದಿರುವ ಹಿರಿಯರ ಇತಿಹಾಸಗಳನ್ನು ಇಂದಿನ ಮಕ್ಕಳಿಗೆ ಪರಿಚಯಿಸಬೇಕೆಂದು ಹೊಳಲ್ಕೆರೆ ಶಾಸಕ ಡಾ.ಎಂ. ಚಂದ್ರಪ್ಪ ತಿಳಿಸಿದರು.

ಆ. 15 ರ ಸ್ವಾತಂತ್ರ್ಯ ದಿನಾಚರಣೆ ಅಂಗವಾಗಿ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಬುಧವಾರ ಕರೆಯಲಾಗಿದ್ದ ಪೂರ್ವಭಾವಿ ಸಭೆಯನ್ನುದ್ದೇಶಿಸಿ ಮಾತನಾಡಿದ ಶಾಸಕ ಡಾ.ಎಂ.ಚಂದ್ರಪ್ಪನವರು ಈ ಬಾರಿಯ 76 ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅರ್ಥಪೂರ್ಣವಾಗಿ ಆಚರಿಸಬೇಕಾಗಿರುವುದರಿಂದ ಎಲ್ಲಾ ಶಾಲಾ ಕಾಲೇಜು ವಿದ್ಯಾರ್ಥಿಗಳನ್ನು ಬೆಳಿಗ್ಗೆ ಎಂಟು ಗಂಟೆಗೆ ಮೈದಾನಕ್ಕೆ ಕರೆತರಬೇಕು. ಅದೇ ರೀತಿ ತಾಲ್ಲೂಕಿನಾದ್ಯಂತ ಎಲ್ಲಾ ಅಧಿಕಾರಿಗಳು ತಪ್ಪದೆ ಭಾಗವಹಿಸುವಂತೆ ಸೂಚಿಸಿದರು.

ಎಲ್ಲಾ ಶಾಲಾ-ಕಾಲೇಜು ಹಾಗೂ

ಹಾಸ್ಟೆಲ್‌ಗಳ ಮಕ್ಕಳು ಧ್ವಜಾರೋಹಣದಲ್ಲಿ ಪಾಲ್ಗೊಳ್ಳಬೇಕು. ಅಧಿಕಾರಿಗಳು ಹೆಚ್ಚಿನ ಹೊಣೆಗಾರಿಕೆಯಿಂದ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಬೇಕು ಎಂದು ಹೇಳಿದರು.

ತಹಶೀಲ್ದಾರ್ ಶ್ರೀಮತಿ ಬೀಬಿ ಫಾತಿಮ, ತಾಲ್ಲೂಕು ಪಂಚಾಯಿತಿ ಮುಖ್ಯ ಕಾರ್ಯನಿರ್ವಹಣಾಧಿಕಾರಿ ರವಿಕುಮಾರ್, ಪುರಸಭೆ ಸದಸ್ಯರುಗಳು, ತಾಲ್ಲೂಕು ಮಟ್ಟದ ಎಲ್ಲಾ ಅಧಿಕಾರಿಗಳು ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿದ್ದರು.

### ರೋಟರಿ ಕ್ಲಬ್ ಮತ್ತು ವಾಸವಿ ಕ್ಲಬ್‌ನಿಂದ ಮೃತ ಪಟ್ಟವರ ಮನೆಗೆ ಭೇಟಿ : ಸಂತ್ವಾನ

**ಚಿತ್ರದುರ್ಗ :** ನಗರದ ಹೂರ ವಲಯದ ಕವಾಡಿಗರ ಹಟ್ಟಿಯಲ್ಲಿ ನಿನ್ನೆ ಕಲುಷಿತ ನೀರನ್ನು ಸೇವನೆ ಮಾಡಿ ಹಲವಾರು ಜನತೆ ತೊಂದರೆಗೆ ಈಡಾಗಿದ್ದು ಇದರಲ್ಲಿ ಮೂರು ಜನ ಸಾವನ್ನಪ್ಪಿದ್ದನ್ನು ಮನಗಂಡ ನಗರದ ರೋಟರಿ ಕ್ಲಬ್ ಮತ್ತು ವಾಸವಿ ಕ್ಲಬ್ ಸಂಯುಕ್ತಾಶ್ರಯದಲ್ಲಿ ಇಂದು ಸ್ಥಳಕ್ಕೆ ಬೇಟಿ ನೀಡಿದ ಎರಡು ಕ್ಲಬ್‌ನ ಪದಾಧಿಕಾರಿಗಳು ಅಲ್ಲಿನ ಜನತೆಯ ಕಷ್ಟವನ್ನು ಆಲಿಸಿ ಮೃತ ಪಟ್ಟವರ ಮನೆಗೆ ಭೇಟಿ ನೀಡಿ ಸಂತ್ವಾನ ಹೇಳಿದರು.

ಇದೇ ಸಮಯದಲ್ಲಿ ಈ ಭಾಗದ ಜನರಿಗೆ ಕುಡಿಯುವ ನೀರಿಗಾಗಿ ಪರಿತಪ್ಪಿಸುತ್ತಿದ್ದನ್ನು ಕಂಡು ಎರಡು ಕ್ಲಬ್‌ನ ಪದಾಧಿಕಾರಿಗಳು ಶುದ್ದವಾದ ಕುಡಿಯುವ ನೀರಿನ ವ್ಯವಸ್ಥೆಯನ್ನು ಮಾಡಿ ಟ್ಯಾಂಕರ್ ಮೂಲಕ ನೀರನ್ನು ಸರಬರಾಜು ಮಾಡಲಾಯಿತು. ಮುಂದಿನ ಎರಡು ದಿನದವರೆಗೂ ಪ್ರತಿ ದಿನ ಮೂರು ಟ್ಯಾಂಕ್‌ಗಳಂತೆ ನೀರನ್ನು ಸರಬರಾಜು ಮಾಡಲಾಗುವುದೆಂದು ರೋಟರಿ ಕ್ಲಬ್ ಅಧ್ಯಕ್ಷರಾದ ಕನಕರಾಜು ತಿಳಿಸಿದರು.

ಈ ಸಂದರ್ಭದಲ್ಲಿ ವಾಸವಿ ಕ್ಲಬ್ ಅಧ್ಯಕ್ಷರಾದ ಲಕ್ಷ್ಮಣ್, ರೋಟರಿ ಕ್ಲಬ್‌ನ ಪದಾಧಿಕಾರಿಗಳಾದ ಎಸ್.ವೀರೇಶ್, ಸೂರ್ಯ ನಾರಾಯಣ, ವೆಂಕಟೇಶ್, ಸರಸ್ವತಿ ನಿಕಿತ ಗಣೇಶ್ ಉಪಸ್ಥಿತರಿದ್ದರು.

### ಅಂತಿಮ ವರ್ಷ ಬಿ ಫಾರ್ಮಸಿ ಪದವಿ ಫಲಿತಾಂಶ ಪ್ರಕಟ

**ಚಿತ್ರದುರ್ಗ :** ನಗರದ ಎಸ್ ಜೆ ಎಂ ಕಾಲೇಜ್ ಆಫ್ ಫಾರ್ಮಸಿ ಯ ಅಂತಿಮ ವರ್ಷ ಬಿ ಫಾರ್ಮಸಿ ಪದವಿ ಪಡೆದ ವಿದ್ಯಾರ್ಥಿಗಳಾದ ಸುಶೀಲಾ ಕುಮಾರಿ 357 ನೇ ರ್‍ಯಾಂಕ್, ನಿತಿನ್ ಎಸ್ ದೇವ್ 739 ನೇ ರ್‍ಯಾಂಕ್, ಪ್ರವರ ಸೇನಾ 3026ನೇ ರ್‍ಯಾಂಕ್ ಹಾಗೂ ಅಂತಿಮ ವರ್ಷದ ವಿದ್ಯಾರ್ಥಿಗಳಾದ ನವ್ಯ ಜಿ ಹಿರೇಮಠ್ 1816 ನೇ ರ್‍ಯಾಂಕ್ ನಸೀಮ ಜಹಾನ್ 2245 ನೇ ರ್‍ಯಾಂಕ್ ಪಡೆದಿರುತ್ತಾರೆ.

ಈ ಮಾನ್ಯತೆಯನ್ನು ಪಡೆದಿರುವ ವಿದ್ಯಾರ್ಥಿಗಳು ಕಾಲೇಜಿಗೆ ಹಾಗೂ ಪೋಷಕರಿಗೂ ಗೌರವವನ್ನು ಮತ್ತು ಇತರ ಕಿರಿಯ ವಿದ್ಯಾರ್ಥಿಗಳಿಗೆ ಪ್ರೇರಣೆಯನ್ನು ಕೊಟ್ಟಿರುತ್ತಾರೆ. ಪೋಷಕರಿಗೆ ಸ್ನಾತಕೋತ್ತರ ಪದವಿಯ ಶುಲ್ಕ ಹಾಗೂ ಖರ್ಚುಗಳ ಭಾರವನ್ನು ನೀಗಿಸಿದ್ದಾರೆ. ವಿದ್ಯಾರ್ಥಿಗಳ ಈ ಸಾಧನೆಗೆ ಎಸ್ ಜೆ ಎಂ ವಿದ್ಯಾಪೀಠ ಆಡಳಿತ ಮಂಡಳಿ ಹಾಗೂ ಕಾಲೇಜಿನ ಪ್ರಾಂಶುಪಾಲರಾದ ಡಾ. ಟಿ ಎಸ್ ನಾಗರಾಜ್ ಮತ್ತು ಕಾಲೇಜಿನ ಆಡಳಿತ ಮಂಡಳಿ ಹಾಗೂ ಕಾಲೇಜಿನ ಸಿಬ್ಬಂದಿ ವರ್ಗ ಶುಭಕೋರಿ ಹರ್ಷ ವ್ಯಕ್ತಪಡಿಸಿದ್ದಾರೆ.

### 2ನೇ ಬಾರಿ ಅವಕಾಶ

**ನಮ್ಮ ಜನ ವಾರ್ತೆ ದಾವಣಗೆರೆ :** ದ್ವಿತೀಯ ಪಿಯುಸಿಯಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳಿಗೆ ನೆರವಾಗಲು ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿ ವತಿಯಿಂದ ಎರಡನೇ ಬಾರಿಗೆ ವಿಶೇಷ ಪೂರಕ ಪರೀಕ್ಷೆಯನ್ನು ನಡೆಸಲಾಗುತ್ತಿದೆ.

ಆಗಸ್ಟ್ 21 ರಿಂದ ಸೆಪ್ಟಂಬರ್ 2 ರವರೆಗೆ ಪರೀಕ್ಷೆಗಳು ಜರುಗಲಿದ್ದು, ಅನುತ್ತೀರ್ಣರಾಗಿರುವ ವಿದ್ಯಾರ್ಥಿಗಳು ಆಗಸ್ಟ್ 10 ರೊಳಗಾಗಿ ಕಾಲೇಜು ಲಾಗಿನ್ ಮೂಲಕ ಪರೀಕ್ಷಾ ಶುಲ್ಕ ಪಾವತಿಸುವ ಮೂಲಕ ನೊಂದಣಿ ಮಾಡಿಕೊಳ್ಳಬೇಕು ಎಂದು ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕವಾಡಿಗರಹಟ್ಟಿಯಲ್ಲಿ ಕಲುಷಿತ ನೀರು : ಕಠಿಣ ಕ್ರಮಕ್ಕೆ ಆಗ್ರಹ

**ಚಿತ್ರದುರ್ಗ :** ನಗರದ ಕವಾಡಿಗರಹಟ್ಟಿಯಲ್ಲಿ ಕಲುಶಿತ ನೀರು ಸೇವಿಸಿ ಇಲ್ಲಿಗೆ 3 ಜನ ಮೃತರಾಗಿದ್ದು ಜಿಲ್ಲಾಡಳಿತ ಘಟನೆ ಕುರಿತು ಸರ್ಕಾರಕ್ಕೆ ವರದಿ ನೀಡಿ ಮರಣ ಹೊಂದಿದವರಿಗೆ ಸರ್ಕಾರದಿಂದ ಸೂಕ್ತ ಪರಿಹಾರ ನೀಡಬೇಕು. ಈ ಘಟನೆಗೆ ಕಾರಣರಾದವರ ಮೇಲೆ ಕಾನೂನು ರೀತಿ ಕ್ರಮ ಜರುಗಿಸಬೇಕೆಂದು ಬಿ.ಜೆ.ಪಿ ಜಿಲ್ಲಾ ಘಟಕದಿಂದ ಆಗ್ರಹಿಸಲಾಯಿತು.

ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿ ಮಾತನಾಡಿದ ವಿಧಾನ ಪರಿಷತ್ ಸದಸ್ಯರಾದ ಕೆ.ಎಸ್.ನವೀನ್ ಈ ಘಟನೆಯ ಬಗ್ಗೆ ಜಿಲ್ಲಾಡಳಿತ ಸೂಕ್ತವಾದ ತನಿಖೆಯನ್ನು ನಡೆಸುವುದರ ಮೂಲಕ ಇದರ ಹಿಂದೆ ಯಾರು ಇದ್ದಾರೆ ಎಂಬುದನ್ನು ಪತ್ತೆ ಮಾಡಿ ಅವರಿಗೆ ಸೂಕ್ತವಾದ ಶಿಕ್ಷೆಯನ್ನು ಕೊಡಿಸಬೇಕು ಅದಕ್ಕೂ ಮುನ್ನಾ ಇದಕ್ಕೆ ಸಂಬಂಧಿಸಿದಂತೆ ನಗರಸಭೆಯ ಸಂಬಂಧಪಟ್ಟ ಅಧಿಕಾರಿಗಳನ್ನು ಅಮಾನತ್ ಮಾಡಬೇಕು ತದ ನಂತರ ಸರ್ಕಾರದಿಂದ ಮೃತ ಪಟ್ಟವರಿಗೆ ಸೂಕ್ತವಾದ ಪರಿಹಾರವನ್ನು ಕೊಡಿಸಬೇಕು ಎಂದು ನವೀನ್ ಅಗ್ರಹಿಸಿ ಸರ್ಕಾರ ಜನರ ಬದುಕಿನ ಜೊತೆಯಲ್ಲಿ ಚಲ್ಲಾಟವನ್ನು ಆಡುತ್ತಿದೆ.

ಚಿತ್ರದುರ್ಗ ಜಿಲ್ಲೆಯ ಮೊಳಕಾಲ್ಮೂರು ತಾಲ್ಲೂಕಿನ ನಾಗಸಮುದ್ರದಲ್ಲಿಯೂ ಸಹಾ ಇದೇ ರೀತಿ ಅಸ್ವಸ್ಥರಾಗಿ ಅವರನ್ನು ಚಿಕಿತ್ಸೆಗಾಗಿ ಬಳ್ಳಾರಿಗೆ ಕಳುಹಿಸಲಾಯಿತು. ಈಗ ಚಿತ್ರದುರ್ಗದಲ್ಲಿ 70ಕ್ಕೂ ಹೆಚ್ಚು ಜನ ಅಸ್ಪತ್ರೆಯಲ್ಲಿ



ಇದ್ದಾರೆ. ಇದರಲ್ಲಿ 9 ಜನರ ಸ್ಥಿತಿ ಚಿಂತಾಜನಕವಾಗಿದೆ. ಈ ಘಟನೆಯ ಬಗ್ಗೆ ಪೂರ್ಣ ಪ್ರಮಾಣದಲ್ಲಿ ತನಿಖೆಯಾಗಬೇಕು ತಪ್ಪಿತಸ್ಥರಿಗೆ ಶಿಕ್ಷೆಯಾಗಬೇಕು, ಅಧಿಕಾರಿಗಳನ್ನು ಅಮಾನತ್ ಮಾಡಿ ಇದರ ಹಿಂದೆ ಯಾವುದೇ ರೀತಿಯ ಷಡ್ಯಂತ್ರ ಇದ್ದರೆ ಅದನ್ನು ಬಯಲು ಮಾಡಬೇಕೆಂದು ಆಗ್ರಹಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾಧ್ಯಕ್ಷರಾದ ಎ.ಮುರಳಿ, ಮುಖಂಡರಾದ ಜಯಪಾಲಯ್ಯ, ನವೀನ್ ಚಾಲುಕ್ಯ, ವಕ್ತಾರರಾದ ದಗ್ಗೆ ಶಿವಪ್ರಕಾಶ್, ನಗರಸಭಾ ಮಾಜಿ ಸದಸ್ಯ ರವಿಕುಮಾರ್, ನಗರಾಭೀವೃದ್ಧಿ ಪ್ರಾಧಿಕಾರದ ಮಾಜಿ ಸದಸ್ಯೆ ಶ್ರೀಮತಿ ರೇಖಾ, ಮೋಹನ್, ಸಂಪತ್, ಮಹಿಳಾ ಘಟಕದ ಅಧ್ಯಕ್ಷೆ ಶ್ರೀಮತಿ ಶೈಲಜಾ ರೆಡ್ಡಿ ಸೇರಿದಂತೆ ಇತರರು ಭಾಗವಹಿಸಿದ್ದರು.

## ರೋಗಗಳನ್ನು ತಡೆಗಟ್ಟಲು ಸಹಕಾರ ಅಗತ್ಯ

**ನಮ್ಮ ಜನ ವಾರ್ತೆ ದಾವಣಗೆರೆ :** ಸಾಂಕ್ರಮಿಕ ರೋಗಗಳನ್ನು ತಡೆಗಟ್ಟಲು ಸಹಕಾರ ಅಗತ್ಯ ಎಂದು ಅವರಗೊಳ್ಳ ಪ್ರಾಥಮಿಕ ಆರೋಗ್ಯ ಕೇಂದ್ರದ ಹಿರಿಯ ಆಡಳಿತ ವೈದ್ಯಾಧಿಕಾರಿ ಡಾ. ವೆಂಕಟೇಶ್ ಎಲ್.ಡಿ ತಿಳಿಸಿದರು.

ಬುಧವಾರ ಸರ್ಕಾರಿ ಪ್ರೌಢಶಾಲೆ ಅವರಗೊಳ್ಳದಲ್ಲಿ ನಡೆದ ಡೆಂಗ್ಯೂ, ಚಿಕ್ಕನ್ ಗುನ್ಯಾ, ಮಲೇರಿಯಾ ವಿರೋಧಿ ಮಾಸಾಚರಣೆ ಹಾಗೂ ಕ್ಷಯ ರೋಗದ ಲಕ್ಷಣಗಳ ಕುರಿತು ಅವರು ಮಾತನಾಡಿದರು.

ಸೊಳ್ಳೆಯಿಂದ ಹರಡುವ ಮಲೇರಿಯಾ, ಡೆಂಗ್ಯೂ, ಚಿಕನ್ ಗುನ್ಯಾ, ಮೆದುಳು ಜ್ವರವು ಮತ್ತಿತರ ರೋಗ ಹರಡುತ್ತವೆ.

**ನಿಯಂತ್ರಣ ಕ್ರಮಗಳು:** ನೀರಿನ ಮೂಲಗಳಾದ ಡ್ರಮ್ಮು, ಬ್ಯಾರೆಲ್, ತೊಟ್ಟಿ, ನೀರಿನ ಗುಂಡಿ, ತೆಂಗಿನಕಾಯಿ ಚಿಪ್ಪು, ಟೀ ಲೋಟ, ಹೂವಿನ ಕುಂಡಲಗಳಲ್ಲಿ ನೀರು ನಿಲ್ಲದಂತೆ ನೋಡಿಕೊಳ್ಳುವುದು ಹಾಗೂ ಮನೆಯ ಸುತ್ತಮುತ್ತ ಘನ ತ್ಯಾಜ್ಯ ಗಳನ್ನು ಸ್ವಚ್ಛಗೊಳಿಸುವುದು, ನಿಂತ ನೀರು ಸೊಳ್ಳೆಯ ತವರೂರು, ಸೊಳ್ಳೆಯ ಪರದೆ ಉಪಯೋಗಿಸುವುದು ಸೊಳ್ಳೆ ನಾಶಕ ದ್ರಾವಣ ಬಳಸುವುದು ಮುಂಜಾಗ್ರತಾವಾಗಿ ಸೊಳ್ಳೆಯ ಉತ್ಪನ್ನ ತಾಣಗಳನ್ನು ಟೆಮೀಫಾಸ್ ದ್ರಾವಣ ಬಳಸಬೇಕು ಹಾಗೂ ಲಾರ್ವಹಾರಿ ಮೀನುಗಳನ್ನು ದೊಡ್ಡ ತೊಟ್ಟಿಗಳಲ್ಲಿ ಬಿಡುವ ಮೂಲಕ ಸೊಳ್ಳೆ ಲಾರ್ವಗಳನ್ನು ನಾಶಗೊಳಿಸುತ್ತವೆ ಎಂದು ತಿಳಿಸಿಕೊಟ್ಟರು.

ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ಚಂದ್ರಪ್ಪ ಬಿ, ಸದಸ್ಯ ಜಿ.ಟಿ.ವೀರಣ್ಣ, ವೈದ್ಯರು ಮತ್ತು ಆರೋಗ್ಯ ಸಿಬ್ಬಂದಿಗಳು, ಆಶಾ ಕಾರ್ಯಕರ್ತರು, ಪ್ರೌಢ ಶಾಲಾ ಶಿಕ್ಷಕರು, ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T